PRGI : KNKAN/26/A0629
ವಿಜಯನಗರ-ಬಳ್ಳಾರಿ-ಕೊಪ್ಪಳ-ರಾಯಚೂರು-ಗದಗ-ಯಾದಗಿರಿ-ದಾವಣಗೆರೆ-ಹಾವೇರಿ-ಕಲಬುರ್ಗಿ- ಜಿಲ್ಲೆಗಳಲ್ಲಿ ಪ್ರಸಾರಿತ

NO.PMG/KA/NK/BLY/04/2026-2028

# ಹೊಸಪೇಟೆ ಧ್ವನಿ

HOSAPETE DHWANI

Kannada Daily morning news paper

ಸ್ವಾಸ್ಥ್ಯ ಸಮಾಜಕ್ಕಾಗಿ ನಮ್ಮ ಧ್ವನಿ

ಸಂಪಾದಕರು
ಕೆ.ಪ್ರಕಾಶ ಕಾಕುಬಾಳು

Editor : K. prakash Kakubalu ಮೊ. 9342568684 VIJAYANAGARA ಕನ್ನಡ ದಿನ ಪತ್ರಿಕೆ

ಸಂಪುಟ : 01 ಸಂಚಿಕೆ : 193 ಭಾನುವಾರ ದಿನಾಂಕ : 18-10-2026 ಪುಟ-4 ಬೆಲೆ : 2 ರೂ. E mail: hosapetedhwani32026@gmail.com

Volume 01 Issue : 193 Sunday Date: 18-10-2026 Page-4 Rs : 2 ರೂ. E mail: hosapetedhwani32026@gmail.com

ಸಕ್ಕರೆ ಎಂಎಸ್‌ಪಿ ಅಂದರೆ ಮಿನಿಮಮ್ ಸಪೋರ್ಟ್ ಪ್ರೈಸ್ ಅಲ್ಲ, ಅದು ಮಿಲ್ಲರ್‌ಗಳ ಕನಿಷ್ಠ ಮಾರಾಟ ದರ ಸರ್ಕಾರ ನಿಗದಿಪಡಿಸಿದ 31 ರೂಪಾಯಿಗಿಂತ ಮಾರುಕಟ್ಟೆಯಲ್ಲಿ ಸಕ್ಕರೆ ಈಗಾಗಲೇ 50 ರೂಪಾಯಿಯಿಂದ 60 ರೂಪಾಯಿಗೆ ಮಾರಾಟವಾಗುತ್ತಿದೆ. ಕೇಂದ್ರ ಸರ್ಕಾರ ತಕ್ಷಣವೇ ಉನ್ನತ ಮಟ್ಟದ ಸಮಿತಿ ರಚಿಸಿದ್ದು, ನವರಾತ್ರಿ ಹಬ್ಬದ ನಂತರ ಸಮಿತಿ ರಾಜ್ಯಕ್ಕೆ ಭೇಟಿ ನೀಡಲಿದೆ.

–ಪ್ರಹ್ಲಾದ್ ಜೋಶಿ
ಕೇಂದ್ರ ಸಚಿವ



## ಎಸ್ಸೆಸ್ಸೆಲ್ಸಿ–ಪಿಯುಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ: ಇನ್ಮುಂದೆ 3 ಪರೀಕ್ಷೆಗಳಿಲ್ಲ, ಕೇವಲ 2 ಮಾತ್ರ

**ಹೊಸಪೇಟೆ ಧ್ವನಿ ನ್ಯೂಸ್ :**

**ಬೆಂಗಳೂರು:** ಕರ್ನಾಟಕದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷಾ ವ್ಯವಸ್ಥೆಯಲ್ಲಿ ಶಿಕ್ಷಣ ಇಲಾಖೆಯು ಮಹತ್ವದ ಬದಲಾವಣೆ ತಂದಿದ್ದು, ಇನ್ಮುಂದೆ ಮೂರು ಪರೀಕ್ಷೆಗಳ ಬದಲಿಗೆ ಕೇವಲ ಎರಡು ಪರೀಕ್ಷೆಗಳನ್ನು ಮಾತ್ರ ನಡೆಸಲು ತೀರ್ಮಾನಿಸಿದೆ. ಈ ಮೂಲಕ ಕಳೆದ ಎರಡು ವರ್ಷಗಳಿಂದ ಜಾರಿಯಲ್ಲಿದ್ದ ಮೂರು ಮುಖ್ಯ ಪರೀಕ್ಷೆಗಳ (Exam 1, 2 & 3) ವ್ಯವಸ್ಥೆಯನ್ನು ರದ್ದುಗೊಳಿಸಿ, ಹಳೆಯ ಮಾದರಿಯಂತೆ ಎರಡೇ ಪರೀಕ್ಷೆಗಳಿಗೆ ಮಿತಿಗೊಳಿಸಲಾಗಿದೆ.

## ಹಗರಿಬೊಮ್ಮನಹಳ್ಳಿ: ವಿಜಯನಗರ ಜಿಲ್ಲೆ ಕಬ್ಬು ಬೆಳೆಗಾರರಿಗೆ ನಿರ್ಲಕ್ಷ್ಯ

# ಪ್ರತಿ ಟನ್‌ಗೆ ರೂ.5500ಕ್ಕೆ ಆಗ್ರಹಿಸಿ ರೈತರ ಪ್ರತಿಭಟನೆ

**ಹೊಸಪೇಟೆ ಧ್ವನಿ ನ್ಯೂಸ್ :**

**ಹಗರಿಬೊಮ್ಮನಹಳ್ಳಿ:** ರಾಜ್ಯದಲ್ಲಿ ಕಬ್ಬು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿ ಪ್ರತಿ ಟನ್ ಕಬ್ಬಿಗೆ 5500 ರೂ. ದರ ನಿಗದಿಪಡಿಸಬೇಕು ಎಂದು ಒತ್ತಾಯಿಸಿ ಅಖಿಲ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಆರ್.ಕವಿತಾ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ಈಶ್ವರ ದೇವಸ್ಥಾನದಿಂದ ಹೊರಟ ರ್‍ಯಾಲಿ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಿತು.

ರಾಜ್ಯ ಉಪಾಧ್ಯಕ್ಷ ದೇವರಮನಿ ಮಹೇಶ್ ಮಾತನಾಡಿ, ಗೊಬ್ಬರ, ಔಷಧಿ, ಡೀಸೆಲ್ ದುಬಾರಿಯಾಗಿದೆ, ಆದರೆ



ಕಬ್ಬಿಗೆ ಸೂಕ್ತ ಬೆಲೆ ಇಲ್ಲ. ಒಂದು ಟನ್ ಬೆಳೆಯಲು ರೂ.2700 ಖರ್ಚಾಗುತ್ತದೆ. ಕಾರ್ಖಾನೆಗಳು ಹಗ್ಗದ ಬೆಲೆಗೆ ಖರೀದಿಸುವುದರಿಂದ ರೈತರು ಆತ್ಮಹತ್ಯೆ ದಾರಿ ಹಿಡಿಯುತ್ತಿದ್ದಾರೆ. ಬೆಳಗಾವಿಯಿಂದ ಹುಬ್ಬಳ್ಳಿವರೆಗೆ ರ್‍ಯಾಲಿ ಹೊರಟಿದೆ, ಬೇಡಿಕೆ ಈಡೇರದಿದ್ದರೆ ಉಗ್ರ ಹೋರಾಟ ಎಂದರು.

ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬುಡ್ಡಿ ಬಸವರಾಜ್ ಮಾತನಾಡಿ, ಮಹಾರಾಷ್ಟ್ರದಲ್ಲಿ ಟನ್‌ಗೆ 5400 ರೂ. ಇದೆ, ಕರ್ನಾಟಕದಲ್ಲಿ 2800 ರೂ. ಮಾತ್ರ, ಡಾ.ಸ್ವಾಮಿನಾಥನ್ ವರದಿಯಂತೆ ದರ ನಿಗದಿ ಮಾಡಬೇಕು. ಒಂದು ಟನ್ ಕಬ್ಬಿನಿಂದ ಕಾರ್ಖಾನೆ ಮಾಲೀಕರು 12 ಸಾವಿರ ಲಾಭ ಮಾಡಿಕೊಳ್ಳುತ್ತಾರೆ ಎಂದರು.

ಜಿಲ್ಲಾಧ್ಯಕ್ಷ ಬಣಕಾರ್ ಬಸವರಾಜ್, ಬೆಳೆಗಾರರ ಬೇಡಿಕೆ ಈಡೇರಿಸದಿದ್ದರೆ ರಾಜ್ಯ ಹೆದ್ದಾರಿ ಬಂದ್‌ಗೆ ಕರೆ ನೀಡುವುದಾಗಿ ಎಚ್ಚರಿಸಿದರು. ಜಿಲ್ಲಾ ಉಪಾಧ್ಯಕ್ಷ ಬಂಟರ ಕುಬೇರ, ತಾಲೂಕು ಅಧ್ಯಕ್ಷ ಸೀಗೆನಹಳ್ಳಿ ಬಸವರಾಜ್ ಮಾತನಾಡಿ, ಸರ್ಕಾರ 3300 ರೂ. ಎನ್ನುತ್ತದೆ, ಆದರೆ ರೈತರಿಗೆ 2800 ರೂ. ಮಾತ್ರ ತಲುಪುತ್ತಿದೆ, ಈ ತಾರತಮ್ಯ ಸರಿಪಡಿಸಬೇಕು ಎಂದರು.

ಪ್ರತಿಭಟನೆಯಲ್ಲಿ ಬಿ.ಶೇಖರಪ್ಪ, ಪಿ.ನಾಗಶೆಟ್ಟಿ ಪತ್ರೆಪ್ಪ, ಮರಿಯಮ್ಮನಹಳ್ಳಿ ಸೋಮಣ್ಣ ಸೇರಿ ಹಲವು ರೈತ ಮುಖಂಡರು ಭಾಗವಹಿಸಿದ್ದರು.

# ಸಾಮಾಜಿಕ ಮಾಧ್ಯಮದಿಂದ ಮಹಿಳಾ ಉದ್ಯಮಿಗಳಿಗೆ ಹೊಸ ಮಾರುಕಟ್ಟೆ

## ಬೆಂಗಳೂರು ವಿವಿ ಮಹಿಳಾ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕಿ ಡಾ.ಎಸ್.ಪಿ.ಶ್ರೀಮತಿ ಅಭಿಮತ

**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ:** ಸಾಮಾಜಿಕ ಮಾಧ್ಯಮಗಳು ಮಹಿಳಾ ಉದ್ಯಮಿಗಳಿಗೆ ಹೊಸ ಮಾರುಕಟ್ಟೆ ಸೃಷ್ಟಿಸಿವೆ. ಫೇಸ್‌ಬುಕ್, ಇನ್‌ಸ್ಟಾಗ್ರಾಂನಂತಹ ವೇದಿಕೆಗಳು ಬಟ್ಟೆ, ಆಹಾರ, ಆರೋಗ್ಯ, ಸೌಂದರ್ಯ ಉತ್ಪನ್ನ ತಯಾರಿಸುವ ಸಣ್ಣ–ಮಧ್ಯಮ ಮಹಿಳಾ ಉದ್ಯಮಿಗಳಿಗೆ ನೇರವಾಗಿ ಗ್ರಾಹಕರನ್ನು ತಲುಪಲು ಅವಕಾಶ ಕಲ್ಪಿಸಿವೆ ಎಂದು ಬೆಂಗಳೂರು ವಿವಿ ಮಹಿಳಾ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕಿ ಡಾ.ಎಸ್.ಪಿ.ಶ್ರೀಮತಿ ಹೇಳಿದರು.

ಹಂಪಿ ಕನ್ನಡ ವಿವಿ ಮಹಿಳಾ ಅಧ್ಯಯನ ವಿಭಾಗದಲ್ಲಿ ಇತ್ತೀಚೆಗೆ ಲಿಂಗಸೂಕ್ಷ್ಮತಾ ಮಾತು–ಅರಿವಿನಿಂದ ಸಮಾನತೆಯತ್ತ' ಮಾಸಿಕ ಕಾರ್ಯಕ್ರಮದಲ್ಲಿ "ಫೆಮ್ವರ್ಟೈಸಿಂಗ್: ಬ್ರಾಂಡ್ ಘೋಷವಾಕ್ಯಗಳು ಮತ್ತು ಚರ್ಚೆಗಳು" ವಿಷಯ ಕುರಿತು ಮಾತನಾಡಿದರು.

ಸೌಂದರ್ಯವರ್ಧಕಗಳ ಜಾಹೀರಾತುಗಳಲ್ಲಿ ಪುರುಷತ್ವ, ಸ್ತ್ರೀತ್ವವನ್ನು ರೂಢಿಗತ ಕಲ್ಪನೆಯಲ್ಲಿ ಬಿಂಬಿಸಲಾಗುತ್ತದೆ. 1960–70ರಲ್ಲಿ ಮಹಿಳೆ ಅಡುಗೆಮನೆಗೆ ಸೀಮಿತ ಎಂಬ ಮನೋಭಾವವನ್ನು ಸ್ತ್ರೀವಾದಿ ಚಳವಳಿಗಳು ಪ್ರಶ್ನಿಸಿದವು. ಚಿಲ್ಲರೆ ವ್ಯಾಪಾರ, ಸೌಂದರ್ಯವರ್ಧಕ, ಒಳಉಡುಪು ಜಾಹೀರಾತುಗಳಲ್ಲಿ ಮಹಿಳೆಯರ



ದೇಹವನ್ನು ವಸ್ತುವಿನಂತೆ ಬಿಂಬಿಸುವ ಪ್ರವೃತ್ತಿ ಇದೆ ಎಂದರು.

ಫೆಮ್ವರ್ಟೈಸಿಂಗ್ ಎಂದರೆ ಸ್ತ್ರೀವಾದಿ ಆಶಯಗಳನ್ನು ಜಾಹೀರಾತಿನೊಂದಿಗೆ ಸಂಯೋಜಿಸಿ ಮಹಿಳಾ ಸ್ವಾವಲಂಬನೆ, ಸಬಲೀಕರಣ ಬಿಂಬಿಸುವ ವಿಧಾನ. ಆದರೆ ಕೆಲ ಬ್ರಾಂಡ್‌ಗಳು ಸಾಮಾಜಿಕ ಬದಲಾವಣೆ ಬದಲು ಮಾರಾಟ ಹೆಚ್ಚಿಸಿಕೊಳ್ಳಲು ಬಳಸುತ್ತವೆ, ಇದನ್ನು 'ಫೆಮ್‌ವಾಷಿಂಗ್' ಎನ್ನುತ್ತಾರೆ ಎಂದು ವಿವರಿಸಿದರು.

ಗ್ರಾಹಕರು ಆಕರ್ಷಕ ಜಾಹೀರಾತು ನಂಬಿ ಖರೀದಿಸಬಾರದು, ಕಂಪನಿಗಳ ಹಿನ್ನೆಲೆ, ಕಾರ್ಯಸಂಸ್ಕೃತಿ, ಗುಣಮಟ್ಟ ತಿಳಿದು ಜವಾಬ್ದಾರಿಯುತವಾಗಿ ಖರೀದಿಸಬೇಕು ಎಂದು ಸಲಹೆ ನೀಡಿ–ದರು.

ಕುಲಸಚಿವ ಡಾ.ವಿರೂಪಾಕ್ಷಿ ಪೂಜಾರಹಳ್ಳಿ ಅಧ್ಯಕ್ಷತೆ ವಹಿಸಿ, ಜಾಹೀರಾತುಗಳ ಪ್ರಭಾವ ಮತ್ತು ಹಿಂದಿನ ಉದ್ದೇಶ ಅರಿಯಬೇಕು ಎಂದರು.

ಕಾರ್ಯಕ್ರಮದಲ್ಲಿ ವಿಭಾಗ ಮುಖ್ಯಸ್ಥ ಡಾ.ಎರಿಸ್ವಾಮಿ, ಪ್ರಾಧ್ಯಾಪಕರಾದ ಡಾ.ಶಿವಾನಂದ ವಿರಕ್ತಮಠ, ಡಾ.ಶೈಲಜಾ ಹಿರೇಮಠ, ಶಕುಂತಲಾ ಚೌಡನಾಯ್ಕ, ಡಾ.ಟಿ.ಎಸ್.ಗೊರವರ ಸೇರಿ ವಿವಿಧ ವಿಭಾಗಗಳ ಡೀನ್, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು ಇದ್ದರು.

## ಕೊಟ್ಟೂರು: ಈಶಾನ್ಯ ಶಿಕ್ಷಕ ಕ್ಷೇತ್ರ ಚುನಾವಣೆಗೆ 2ನೇ ಹಂತದ ತರಬೇತಿ



**ಹೊಸಪೇಟೆ ಧ್ವನಿ ನ್ಯೂಸ್ :**

**ಕೊಟ್ಟೂರು :** ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ಕ್ಕೆ ಸಂಬಂಧಿಸಿದಂತೆ ಮತಗಟ್ಟೆಗೆ ನಿಯೋಜಿತ ಸಿಬ್ಬಂದಿಗೆ ಶನಿವಾರ ಮಹಾತ್ಮ ಗಾಂಧಿ ಸಭಾಂಗಣ, ತಾಲೂಕು ಕಚೇರಿ ಕೊಟ್ಟೂರಿನಲ್ಲಿ 2ನೇ ಹಂತದ ತರಬೇತಿ ನೀಡಲಾಯಿತು.

ಈ ಹಿಂದೆ ಕೊಪ್ಪಳ ಜಿಲ್ಲಾಧಿಕಾರಿ ಕಚೇರಿಯಲ್ಲಿ 1ನೇ ಹಂತದ ತರಬೇತಿ ನೀಡಲಾಗಿತ್ತು.

ಮಾಸ್ಟರ್ ಟ್ರೈನರ್ ಮಹೇಶ್ ಅವರು ಚುನಾವಣಾ ಪ್ರಕ್ರಿಯೆ ಬಗ್ಗೆ ಪ್ರಾತ್ಯಕ್ಷಿಕೆ ತರಬೇತಿ ನೀಡಿದರು. ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿ ಕಲಬುರಗಿ ಅವರು ವಿಡಿಯೋ ಸಂವಾದದ ಮೂಲಕ ಪ್ರಮುಖ ಸೂಚನೆಗಳನ್ನು ನೀಡಿ ತರಬೇತಿಯನ್ನು ವೀಕ್ಷಿಸಿದರು.

ಕೊಟ್ಟೂರು ತಾಲೂಕಿನಲ್ಲಿ ಒಟ್ಟು 2 ಮತಗಟ್ಟೆಗಳಿದ್ದು, ಮತಗಟ್ಟೆ ಸಂ.25 ಕೋಗಳಿಯಲ್ಲಿ 31 ಮತದಾರರು, ಸಂ.26 ಕೊಟ್ಟೂರಿನಲ್ಲಿ 491 ಸೇರಿ ಒಟ್ಟು 523 ಮತದಾರರಿದ್ದಾರೆ.

ಅ.23ರಂದು ಚುನಾವಣೆ ನಡೆಯಲಿದ್ದು, ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸುವಂತೆ ಗ್ರೇಡ್–2 ತಹಸೀಲ್ದಾರ್ ಎಂ.ಪ್ರತಿಭಾ ಸೂಚಿಸಿದರು. ಪ್ರತಿ ಮತಗಟ್ಟೆಗೆ 1 PRO, 1 APRO, PO-1, PO–2 ಹಾಗೂ 1 ಮೈಕ್ರೋ ಅಬ್ಸರ್ವರ್, ತಾಲೂಕಿಗೆ ಒಬ್ಬ ಸೆಕ್ಟೋರಲ್ ಅಧಿಕಾರಿಯನ್ನು ನೇಮಿಸಲಾಗಿದ್ದು, ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಹಸೀಲ್ದಾರ್ ಅಮರೇಶ್ ಜಿ.ಕೆ. ತಿಳಿಸಿದರು.

# ಬರ ಪರಿಸ್ಥಿತಿ : ಹಿಂಗಾರು ಹಂಗಾಮಿನಲ್ಲಿ ಪರ್ಯಾಯ ಬೆಳೆ ಬೆಳೆಯಲು ರೈತರಿಗೆ ಡಿಸಿ ಕವಿತಾ ಮನ್ನಿಕೇರಿ ಕರೆ

## ಕಡಲೆ, ಜೋಳ, ಕುಸುಬೆ, ಹುರಳಿ, ಸೂರ್ಯಕಾಂತಿ, ಅಲಸಂದಿ ಬೆಳೆಗೆ ಆದ್ಯತೆ ನೀಡಿ

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ(ಹೊಸಪೇಟೆ):** ಜಿಲ್ಲೆಯಲ್ಲಿ ಮಳೆಯ ಕೊರತೆ ಹಾಗೂ ಮಣ್ಣಿನಲ್ಲಿ ತೇವಾಂಶದ ಅಭಾವದಿಂದ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ, ರೈತರು ಹಿಂಗಾರು ಹಂಗಾಮಿನಲ್ಲಿ ಕಡಿಮೆ ನೀರು ಬಳಸಿ, ಕಡಿಮೆ ಅವಧಿಯಲ್ಲಿ ಕಟಾವಿಗೆ ಬರುವ ಹಾಗೂ ಬರ ತಡೆದುಕೊಳ್ಳುವ ಸಾಮರ್ಥ್ಯವಿರುವ ಪರ್ಯಾಯ ಬೆಳೆಗಳನ್ನು ಬೆಳೆಯಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಕರೆ ನೀಡಿದರು.

ನಗರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ವತಿಯಿಂದ ಹಿಂಗಾರು ಹಂಗಾಮಿನಲ್ಲಿ ಪರ್ಯಾಯ ಬೆಳೆಗಳ ಕುರಿತು ಜಾಗೃತಿ ಮೂಡಿಸುವ ಪೋಸ್ಟರ್ ಬಿಡುಗಡೆ ಮಾಡಿ ಅವರು ಮಾತನಾಡಿದರು.

ರೈತರು ಬೆಳೆ ಆಯ್ಕೆ ಮಾಡುವ ಮುನ್ನ ಪ್ರಸ್ತುತ ಮಳೆಯ ಪ್ರಮಾಣ, ಮುಂದಿನ ಮಳೆ ಮುನ್ಸೂಚನೆ ಹಾಗೂ ಬಿತ್ತನೆಗೆ ಉಳಿದಿರುವ ಅವಧಿಯನ್ನು ಗಮನಿಸಬೇಕು.



ತೀವ್ರ ಬರ ಪರಿಸ್ಥಿತಿಯಲ್ಲಿ ಬೆಳೆ ನಷ್ಟವನ್ನು ಕಡಿಮೆ ಮಾಡಲು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕಾಪಾಡಲು ಕಡಲೆ, ಜೋಳ, ಕುಸುಬೆ, ಹುರಳಿ, ಸೂರ್ಯಕಾಂತಿ ಮತ್ತು ಅಲಸಂದಿ ಬೆಳೆಗಳನ್ನು ಪರ್ಯಾಯವಾಗಿ ಬೆಳೆಯುವುದು ಸೂಕ್ತವಾಗಿದೆ ಎಂದು ತಿಳಿಸಿದರು.

ನೀರಾವರಿ ಸೌಲಭ್ಯವಿರುವ ರೈತರು ರಾಗಿ ಹಾಗೂ ಶೇಂಗಾ ಬೆಳೆಯಬಹುದು. ಬಿತ್ತನೆಗೂ ಮುನ್ನ ಬೀಜ ಮೊಳಕೆಯೊಡೆಯಲು ಮತ್ತು ಸಸಿಗಳ ಬೆಳವಣಿಗೆಗೆ ಅಗತ್ಯವಾದ ತೇವಾಂಶ ಮಣ್ಣಿನಲ್ಲಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಬೀಜೋಪಚಾರ, ತೇವಾಂಶ ಸಂರಕ್ಷಣೆ, ನೀರಿನ ಉಳಿತಾಯ ಹಾಗೂ ಮೇವು ನಿರ್ವಹಣಾ ಪದ್ಧತಿಗಳನ್ನು ಅನುಸರಿಸಬೇಕು ಎಂದು ಸಲಹೆ ನೀಡಿ–ದರು.

ಸರ್ಕಾರದ ಯೋಜನೆಗಳ ಸೌಲಭ್ಯ ಪಡೆಯಲು ನೋಂದಣಿ ಕಡ್ಡಾಯ : ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಗಳ ವಿವರಗಳನ್ನು ರೈತರ ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ಕಡ್ಡಾಯವಾಗಿ ದಾಖಲಿಸಬೇಕು. ಫ್ರೂಟ್ಸ್ ತಂತ್ರಾಂಶದಲ್ಲಿ ಎಫ್‌ಐಡಿ ಮಾಡಿಸಿ, ಬಾಕಿ ಉಳಿದಿರುವ ಸರ್ವೆ ನಂಬರ್‌ಗಳನ್ನು ಸೇರ್ಪಡೆಗೊಳಿಸಬೇಕು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಮುಂದಿನ ಕಂತಿನ ಹಣ ಪಡೆಯಲು ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ. ಅಲ್ಲದೆ, ಆಯಾ ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ವ್ಯಾಪ್ತಿಗೆ ನಿಗದಿಪಡಿಸಿರುವ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದ ಅವರು, ಭಿತ್ತಿ ಪತ್ರಗಳನ್ನು ಸಾರ್ವಜನಿಕರು ಹೆಚ್ಚಾಗಿ ಭೇಟಿ ನೀಡುವ ಬಸ್ ನಿಲ್ದಾಣ, ಸ್ಥಳೀಯ ಆಡಳಿತ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ತಾಲ್ಲೂಕು ಕಚೇರಿಗಳಲ್ಲಿ ಇನ್ನಿತರೆ ಜನವಸತಿ ಪ್ರದೇಶಗಳಲ್ಲಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿ–ದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಉಪ ನಿರ್ದೇಶಕ ವಾಮದೇವ್ ಕೊಳ್ಳಿ ಇದ್ದರು.

# ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಗೆ ಮುಖಂಡರ ಬಹಿಷ್ಕಾರ : ಮೀಸಲಾತಿ ಹೆಚ್ಚಳಕ್ಕೆ ಒಕ್ಕೊರಲಿನ ಆಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ :** ಮೀಸಲಾತಿ ವಿಚಾರದಲ್ಲಿ ಸಮುದಾಯಕ್ಕೆ ನ್ಯಾಯ ದೊರೆಯಬೇಕೆಂದು ಆಗ್ರಹಿಸಿ, ವಾಲ್ಮೀಕಿ ಜಯಂತಿಯನ್ನು ಬಹಿಷ್ಕರಿಸುವ ನಿರ್ಧಾರ ಕೈಗೊಂಡಿರುವ ವಾಲ್ಮೀಕಿ ಸಮುದಾಯದ ಮುಖಂಡರು, ಪಟ್ಟಣದ ತಾಲೂಕು ಆಡಳಿತ ಕಚೇರಿಯ ಸಭಾಂಗಣದಲ್ಲಿ ತಹಶೀಲ್ದಾರ್ ವಿ.ಕೆ. ನೇತ್ರಾವತಿ ಅವರ ಅಧ್ಯಕ್ಷತೆಯಲ್ಲಿ ನಡೆದ ಜಯಂತಿಯ ಪೂರ್ವಭಾವಿ ಸಭೆಯಿಂದ ಹೊರನಡೆದು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕು ಆಡಳಿತದ ವತಿಯಿಂದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ ಸಿದ್ಧತೆ ಕುರಿತು ಸಭೆ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮೀಸಲಾತಿ



ವಿಚಾರವನ್ನು ಪ್ರಸ್ತಾಪಿಸಿದ ಸಮುದಾಯದ ಮುಖಂಡರು, ತಮ್ಮ ಬೇಡಿಕೆಗಳಿಗೆ ನ್ಯಾಯ ದೊರೆಯುವವರೆಗೆ ಸರ್ಕಾರಿ ಕಚೇರಿಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಿಲ್ಲ ಎಂದು ಘೋಷಣೆ ಕೂಗುತ್ತಾ ಸಭೆಯನ್ನು ಬಹಿಷ್ಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಾಲ್ಮೀಕಿ ಸಮುದಾಯದ ಮುಖಂಡರಾದ ವಕೀಲರಾದ ಓಂಕಾರಪ್ಪ ಮಾತನಾಡಿ, ಮೀಸಲಾತಿ ವಿಚಾರದಲ್ಲಿ ಸಮುದಾಯದ ಬೇಡಿಕೆಗಳಿಗೆ ಸೂಕ್ತ ಸ್ಪಂದನೆ ದೊರೆಯಬೇಕು ಎಂದು ಒತ್ತಾಯಿಸಿದರು. ಮೀಸಲಾತಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಗಮನಹರಿಸಬೇಕು ಎಂಬುದು ನಮ್ಮ ವಾದವಾಗಿದೆ ಎಂದರು.

ಮೀಸಲಾತಿ ವಿಚಾರಕ್ಕೆ ಸಂಬಂಧಿಸಿದಂತೆ ಸಮುದಾಯದ ಪ್ರಸ್ತುತ ನಿಲುವು, ಮುಂದಿನ ಹೋರಾಟದ ರೂಪುರೇಷೆ, ಹೋರಾಟದ ಸ್ವರೂಪ ಹಾಗೂ ಸಮುದಾಯದ ಮುಖಂಡರು ಮತ್ತು ಜನರ ಸಹಭಾಗಿತ್ವದ ಕುರಿತು ಚರ್ಚೆ ನಡೆಸುವ ನಿರೀಕ್ಷೆಯಿದೆ. ಸಮುದಾಯದ ಹಕ್ಕುಗಳು ಮತ್ತು ಬೇಡಿಕೆಗಳ ಈಡೇರಿ–ಕೆಗಾಗಿ ಮುಂದಿನ ದಿನಗಳಲ್ಲಿ ಯಾವ ರೀತಿಯ ಹೋರಾಟ ಕೈಗೊಳ್ಳಬೇಕು ಎಂಬುದರ ಕುರಿತು ಯೋಜನೆ ರೂಪಿಸಲಾಗುವುದು ಎಂದು ಕಾವಲ್ಲಿ ಶಿವಪ್ಪ ನಾಯಕ ಹೇಳಿದರು.

ಒಂದೆಡೆ ಕೂಡ್ಲಿಗಿಯಲ್ಲಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಗೆ ಬಹಿಷ್ಕಾರ

ಪುಟ– 3

## ಹೊಸೂರು ಗ್ರಾಮದಲ್ಲಿ ಬಾಲಮೇಳ

# ಮಕ್ಕಳ ಪ್ರತಿಭೆ ಅನಾವರಣ



**ಹೊಸಪೇಟೆ ಧ್ವನಿ ನ್ಯೂಸ್ :**

ಹೊಸಪೇಟೆ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಅಜೀಂ ಪ್ರೇಮ್ ಜೀ ಫೌಂಡೇಶನ್ ಸಹಯೋಗದಲ್ಲಿ ಹೊಸೂರು ಗ್ರಾಮದಲ್ಲಿ ಬಾಲಮೇಳ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಉಪ ನಿರ್ದೇಶಕ ಗಂಗಪ್ಪ ಮಾತನಾಡಿ, ಹಿಂದೆ ಅಂಗನವಾಡಿ ಕೇಂದ್ರಗಳನ್ನು ಉಪ್ಪಿಟ್ಟು ಶಾಲೆ, ಚಿತ್ರಾನ್ನ ಶಾಲೆ ಎನ್ನುತ್ತಿದ್ದರು. ಈಗ ಪೌಷ್ಟಿಕ ಆಹಾರದ ಜೊತೆಗೆ ಬೌದ್ಧಿಕ ಸಾಮರ್ಥ್ಯ, ಸೃಜನಶೀಲತೆ, ಕಲಿಕಾ ಆಸಕ್ತಿ ಬೆಳೆಸುವ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ ಎಂದರು. ಅಜೀಂ ಪ್ರೇಮ್ ಜೀ ಫೌಂಡೇಶನ್ ಸಹಯೋಗದಲ್ಲಿ ಮೌಲ್ಯಾಧಾರಿತ, ನೈತಿಕ ಶಿಕ್ಷಣದ ಜೊತೆಗೆ ಆಟ, ಹಾಡು, ಕಥೆ ಮೂಲಕ ಕಲಿಕೆಯನ್ನು ಆಸಕ್ತಿದಾಯಕವಾಗಿ ಕಲಿಸಲಾಗುತ್ತಿದೆ. ಬಾಲಮೇಳ ಮಕ್ಕಳ ಪ್ರತಿಭೆ ಗುರುತಿಸಲು, ಸರ್ವತೋಮುಖ ಬೆಳವಣಿಗೆಗೆ ಸಹಕಾರಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿಡಿಪಿಒ ಹೊನ್ನೂರು ವಲಿ, ಪಿಡಿಒ ಗಂಗಾಧರ್, ಹಿರಿಯ ಮೇಲ್ವಿಚಾರಕಿ ಅಂಬುಜಾ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಅನುಪಮಾ, ವಲಯ ಮೇಲ್ವಿಚಾರಕಿ ಎಲ್.ಡಿ.ನದಾಫ್, ಮಿಷನ್ ಶಕ್ತಿ ಸಂಯೋಜಕಿ ವಿದ್ಯಾ, ಅಜೀಂ ಪ್ರೇಮ್ ಜೀ ಫೌಂಡೇಶನ್ ಜಿಲ್ಲಾ ಸಂಯೋಜಕರಾದ ಮಂಜುನಾಥ್, ದರ್ಶಿತಾ, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಮಕ್ಕಳು, ಗ್ರಾಮಸ್ಥರು ಇದ್ದರು.

## ಹರಪನಹಳ್ಳಿ: ಸಿಡಿಲು ಬಡಿದು ಒಂದು ಹೋರಿ, ಎರಡು ಕುರಿ ಸಾವು - ಹಲವೆಡೆ ಟಿವಿ, ಯುಪಿಎಸ್ ಸುಟ್ಟು ಹಾನಿ



**ಹರಪನಹಳ್ಳಿ :** ತಾಲೂಕಿನಲ್ಲಿ ಶುಕ್ರವಾರ ಸಂಜೆ ಗುಡುಗು–ಸಿಡಿಲು ಸಹಿತ ಮಳೆ ಸುರಿದಿದ್ದು, ಸಿಡಿಲು ಬಡಿದು ಒಂದು ಹೋರಿ, ಎರಡು ಕುರಿಗಳು ಮೃತಪಟ್ಟಿವೆ.

ನಗರದ ಜಿ.ಅರುಣ್ ಕುಮಾರ್ ತಂದೆ ಪರಸಪ್ಪ ಅವರಿಗೆ ಸೇರಿದ ಹೋರಿ ಮಧ್ಯಾಹ್ನ 3 ಗಂಟೆಗೆ ಸಿಡಿಲು ಬಡಿದು ಮೃತಪಟ್ಟಿದೆ. ಕವಲಹಳ್ಳಿ ಗ್ರಾಮದಲ್ಲಿ ಹನುಮಂತಪ್ಪ ಅವರಿಗೆ ಸೇರಿದ ಎರಡು ಕುರಿಗಳು ಸಿಡಿಲಿಗೆ ಬಲಿಯಾಗಿವೆ.

ಸ್ಥಳಕ್ಕೆ ಆಗಮಿಸಿದ ಪಶುಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಕೆ. ರವಿಪ್ರಕಾಶ್ ಮರಣೋತ್ತರ ಪರೀಕ್ಷೆ ನಡೆಸಿದರು.

ಸಿಡಿಲಿನ ಆರ್ಭಟಕ್ಕೆ ನಗರದ ಹಲವು ಮನೆಗಳ ಟಿವಿ, ಯುಪಿಎಸ್, ಬ್ಯಾಟರಿ, ಡಿಶ್ ಸುಟ್ಟು ಹೋಗಿವೆ. ಮಠದಕೇರಿ, ಜೈನರ ಓಣಿ, ಮೇಗಳಪೇಟೆ, ತಾಯಮ್ಮನ ಹುಣಸೆಮರ ರಸ್ತೆ, ಬ್ರೂಸ್ ಪೇಟೆ, ತೆಗ್ಗಿಮಠ ಮುಂಭಾಗ, ಕೊಟ್ಟೂರು ರಸ್ತೆ, ಬಸ್ ನಿಲ್ದಾಣ, ಕಾರು ನಿಲ್ದಾಣ ರಸ್ತೆಗಳಲ್ಲಿ ಚರಂಡಿ ತುಂಬಿ ರಸ್ತೆಗಳು ಜಲಾವೃತಗೊಂಡವು.

ಅರಸೀಕೆರೆ ಹೋಬಳಿ ಉಚ್ಚಂಗಿದುರ್ಗದಲ್ಲೂ ಉತ್ತಮ ಮಳೆಯಾಗಿದ್ದು ರೈತರಿಗೆ ತೊಂದ–ರೆಯಾಗಿದೆ.

# ರಾಸು ವಿಮಾ ಅಕ್ರಮದಲ್ಲಿ ರೂ.44.37 ಲಕ್ಷ ಅವ್ಯವಹಾರ ಪತ್ತೆ: ಸಿಬ್ಬಂದಿ ಅಮಾನತು

## ರೂ.42.04 ಲಕ್ಷ ವಸೂಲಿಗೆ ಕ್ರಮ; 2022ರಿಂದ 2026ರವರೆಗಿನ ವಹಿವಾಟಿನ ಸಮಗ್ರ ಲೆಕ್ಕಪರಿಶೋಧನೆಗೆ ಆದೇಶ

**ಹೊಸಪೇಟೆ ಧ್ವನಿ ನ್ಯೂಸ್ :**

ಬಳ್ಳಾರಿ, ಅ.17: ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಒಕ್ಕೂಟದ (ರಬಕೊವಿ) ರಾಸು ವಿಮೆ ಪರಿಹಾರ ವಿತರಣೆಯಲ್ಲಿ ಅಕ್ರಮ ನಡೆದಿರುವುದು ಬ್ಯಾಂಕ್ ದಾಖಲೆಗಳ ಪರಿಶೀಲನೆಯಿಂದ ಬೆಳಕಿಗೆ ಬಂದಿದೆ. ಪ್ರಕರಣಕ್ಕೆ ಸಂಬಂಧಿಸಿದ ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದ್ದು, ರೂ.2.04 ಲಕ್ಷ ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ರೈತರಿಗೆ ನ್ಯಾಯ ಒದಗಿಸುವ ಉದ್ದೇಶದಿಂದ ಪ್ರಕರಣದ ಸಮಗ್ರ ತನಿಖೆ ನಡೆಸಲಾಗುತ್ತಿದೆ ಎಂದು ಒಕ್ಕೂಟದ ಉಪಾಧ್ಯಕ್ಷ ಸತ್ಯನಾರಾಯಣ ತಿಳಿಸಿದರು.

ನಗರದ ರಬಕೊವಿ ಕಚೇರಿಯಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಟೋಬರ್ 14 ಮತ್ತು 15ರಂದು ಮಾಧ್ಯಮಗಳಲ್ಲಿ ಪ್ರಕಟವಾದ ವರದಿಗಳಿಗೆ ಸ್ಪಷ್ಟನೆ ನೀಡಿದರು. ರೈತರ ಜಾನುವಾರುಗಳಿಗೆ ವಿಮಾ ಸೌಲಭ್ಯ ಒದಗಿಸುವ ಉದ್ದೇಶದಿಂದ ಜಾರಿಗೊಳಿಸಲಾದ ಯೋಜನೆಯಲ್ಲಿ ಕಂಡುಬಂದಿರುವ ಲೋಪದೋಷಗಳನ್ನು ಸರಿಪಡಿಸಿ, ಅರ್ಹ ಫಲಾನುಭವಿಗಳಿಗೆ ವಿಮಾ ಪರಿಹಾರ ತಲುಪಿಸಲು ಆಡಳಿತ ಮಂಡಳಿ ಕ್ರಮ ಕೈಗೊಳ್ಳುತ್ತಿದೆ ಎಂದರು.

**ಹಾಲಿನ ದರ ಏರಿಕೆಯೊಂದಿಗೆ ವಿಮಾ ಯೋಜನೆ**

ಕೆಎಂಎಫ್ 2020ರ ಫೆಬ್ರವರಿ 10ರ ಹಾಲಿನ ದರವನ್ನು ಪ್ರತಿ ಲೀಟರ್‌ಗೆ ರೂ.2 ಹೆಚ್ಚಿಸಿದ ಸಂದರ್ಭದಲ್ಲಿ, ರೈತರ ಜಾನುವಾರುಗಳಿಗೆ ವಿಮೆ ಮಾಡಿಸಲು ಪ್ರತಿ ಲೀಟರ್ ಹಾಲಿನ ಮಾರಾಟದ ಮೇಲೆ 40 ಪೈಸೆ ಮೀಸಲಿಡಲು ನಿರ್ಧರಿಸಲಾಗಿತ್ತು. 2020ರ ಫೆಬ್ರವರಿ 13ರಂದು ನಡೆದ ಒಕ್ಕೂಟದ 303ನೇ ಆಡಳಿತ ಮಂಡಳಿ ಸಭೆಯಲ್ಲಿ ಈ ಕುರಿತು ತೀರ್ಮಾನ ಕೈಗೊಳ್ಳಲಾಗಿತ್ತು.

ಯೋಜನೆಯಡಿ ವಿಮಾ ಕಂತಿನ ಶೇ.60ರಷ್ಟು ಮೊತ್ತವನ್ನು ಒಕ್ಕೂಟ ಭರಿಸಲಿದ್ದು, ಉಳಿದ ಶೇ.40ರಷ್ಟು ಮೊತ್ತವನ್ನು ರೈತರ ಹಾಲಿನ ಬಿಲ್‌ಗಳಿಂದ ಕಡಿತಗೊಳಿಸಿ ವಿಮಾ ಕಂಪನಿಗೆ ಪಾವತಿಸುವ ವ್ಯವಸ್ಥೆ ಜಾರಿಯಲ್ಲಿದೆ ಎಂದು ವಿವರಿಸಿದರು.

**ರೈತರ ಪ್ರತಿಭಟನೆ ಬಳಿಕ ತನಿಖೆಗೆ ವೇಗ :**

2025ರ ಜುಲೈನಲ್ಲಿ ನೂತನ ಆಡಳಿತ ಮಂಡಳಿ ಅಸ್ತಿತ್ವಕ್ಕೆ



ಬಂದ ಬಳಿಕ ಜಾನುವಾರು ವಿಮಾ ಪರಿಹಾರ ವಿತರಣೆಯಲ್ಲಿನ ವಿಳಂಬದ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಯಿತು.

2025ರ ಸೆಪ್ಟೆಂಬರ್ 22ರಂದು ನಡೆದ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಜಾನುವಾರುಗಳು ಮೃತಪಟ್ಟಿದ್ದರೂ ಎರಡು–ಮೂರು ವರ್ಷಗಳಿಂದ ವಿಮಾ ಪರಿಹಾರ ದೊರೆತಿಲ್ಲ ಎಂದು ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ 2026ರ ಜೂನ್ 30ರಂದು ಹಗರಿಬೊಮ್ಮನಹಳ್ಳಿ, ಹರಪನಹಳ್ಳಿ, ಕೂಡ್ಲಿಗಿ, ಕುಷ್ಟಗಿ ಮತ್ತು ಯಲಬುರ್ಗಾ ಸೇರಿದಂತೆ ವಿವಿಧ ತಾಲೂಕುಗಳ ನೂರಾರು ರೈತರು ಒಕ್ಕೂಟದ ಕಚೇರಿ ಎದುರು ಪ್ರತಿಭಟನೆ ನಡೆಸಿದ್ದರು.

ರೈತರ ದೂರುಗಳ ಪರಿಶೀಲನೆಗಾಗಿ ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಆಡಳಿತ ಮಂಡಳಿ ಸದಸ್ಯರು ಮತ್ತು ಅಧಿಕಾರಿಗಳನ್ನು ಒಳಗೊಂಡ ವಿಶೇಷ ಉಪಸಮಿತಿಯನ್ನು ರಚಿಸಲಾಯಿತು. ಸಮಿತಿಯು 2026ರ ಜುಲೈ 28 ಮತ್ತು ಆಗಸ್ಟ್ 1ರಂದು ಸಭೆ ನಡೆಸಿ ಬ್ಯಾಂಕ್ ದಾಖಲೆಗಳನ್ನು ಪರಿಶೀಲಿಸಿದಾಗ ಹಣ ವರ್ಗಾವಣೆಯಲ್ಲಿ ಅಕ್ರಮ ನಡೆದಿರುವುದು ಪತ್ತೆಯಾಯಿತು ಎಂದು ಸತ್ಯನಾರಾಯಣ ತಿಳಿಸಿದರು.

**ಕುಟುಂಬದವರ ಖಾತೆಗಳಿಗೆ ಹಣ ವರ್ಗಾವಣೆ**

ರೈತ ಕಲ್ಯಾಣ ಟ್ರಸ್ಟ್ ವಿಭಾಗದ ಲೆಕ್ಕ ಸಹಾಯಕಿ ಕೆ. ಉಮಾಮಹೇಶ್ವರಿ ಅವರು ನೈಜ ಫಲಾನುಭವಿಗಳ ಹೆಸರುಗಳನ್ನು ಬದಲಾಯಿಸಿ ತಮ್ಮ ಕುಟುಂಬದವರ ಖಾತೆಗಳಿಗೆ ಹಣ ವರ್ಗಾಯಿಸಿರುವುದು ದಾಖಲೆಗಳ ಪರಿಶೀಲನೆಯಿಂದ ತಿಳಿದುಬಂದಿದೆ ಎಂದು ಅವರು ಆರೋಪಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ನೋಟರಿ ಸಮ್ಮುಖದಲ್ಲಿ ಪ್ರಮಾಣೀಕರಿಸಿದ ಅಫಿಡವಿಟ್ ಹಾಗೂ ತಪ್ಪೊಪ್ಪಿಗೆ ಪತ್ರ ಸಲ್ಲಿಸಿದ್ದಾರೆ. ಒಕ್ಕೂಟದ ಶಿಸ್ತು ನಿಯಮಗಳ ಪ್ರಕಾರ ಅವರನ್ನು ಅಮಾನತುಗೊಳಿಸಲಾಗಿದ್ದು, ರಾಸು ವಿಮೆ ಮತ್ತು ರೈತ ಕಲ್ಯಾಣ ಟ್ರಸ್ಟ್‌ಗೆ ಸಂಬಂಧಿಸಿದಂತೆ ಒಟ್ಟು ರೂ.42,04,991 ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಈ ಪೈಕಿ 2026ರ ಆಗಸ್ಟ್ 3ರಂದು ರೂ.28 ಲಕ್ಷವನ್ನು ಒಕ್ಕೂಟದ ಬ್ಯಾಂಕ್ ಖಾತೆಗೆ ಮರುಪಾವತಿಸಲಾಗಿದೆ ಎಂದು ತಿಳಿಸಿದರು.

ಒಕ್ಕೂಟ ನೀಡಿರುವ ಮಾಹಿತಿಯ ಪ್ರಕಾರ, ಉಮಾಮಹೇಶ್ವರಿ ಅವರ ತಂದೆ ಬಸವರಾಜ್ ಕೆ. ಅವರ ಖಾತೆಗೆ ರೂ.15.27 ಲಕ್ಷ, ತಾಯಿ ಎರಮ್ಮ ಕೆ. ಅವರ ಖಾತೆಗೆ ರೂ.9.54 ಲಕ್ಷ, ಪತಿ ಸಾಗರ್ ಬಾಬು ಅವರ ಖಾತೆಗೆ ರೂ.2.50 ಲಕ್ಷ ಹಾಗೂ ಕಚೇರಿಯ ಸಹಾಯಕಿ ಸಾಗಾಯಿ ರಾಣಿ ಅವರ ಖಾತೆಗೆ ರೂ.55 ಸಾವಿರ ಜಮೆಯಾಗಿದೆ. ಈ ನಾಲ್ಕು ಖಾತೆಗಳಿಗೆ ಒಟ್ಟು ರೂ.27,86,100 ವರ್ಗಾವಣೆಯಾಗಿರುವುದಾಗಿ ಒಕ್ಕೂಟ ತಿಳಿಸಿದೆ.

ರೈತರ ಜಾನುವಾರು ವಿಮೆಗಾಗಿ ಒಕ್ಕೂಟದಿಂದ ಒಟ್ಟು ರೂ.11,99,60,000 ಪಾವತಿಸಲಾಗಿದೆ ಎಂಬ ಮಾಹಿತಿಯನ್ನೂ ಅವರು ನೀಡಿದರು.

**ಅಧಿಕಾರಿಗಳ ಪಾತ್ರದ ಬಗ್ಗೆ ಸ್ಪಷ್ಟನೆ :**

ವ್ಯವಸ್ಥಾಪಕ ನಿರ್ದೇಶಕ ಎಸ್. ಸುದರ್ಶನರೆಡ್ಡಿ ಅವರು 2026ರ ಜೂನ್ 1ರಂದು ಅಧಿಕಾರ ವಹಿಸಿಕೊಂಡಿದ್ದು, ತನಿಖೆಯಲ್ಲಿ ಉಲ್ಲೇಖಿಸಲಾದ ಅವ್ಯವಹಾರವು 2023ರಿಂದ 2025ರ ಅವಧಿಯಲ್ಲಿ ನಡೆದಿರುವುದಾಗಿ ಒಕ್ಕೂಟ ಸ್ಪಷ್ಟಪಡಿಸಿದೆ.

ಉಪವ್ಯವಸ್ಥಾಪಕ ವೆಂಕಟೇಶ್ ಜವಳಿ ಅವರು ರಾಸು ವಿಮೆಗೆ ಸಂಬಂಧಿಸಿದ ಕೆಲಸಗಳನ್ನು ನಿರ್ವಹಿಸುತ್ತಿರಲಿಲ್ಲ. ಉಪವ್ಯವಸ್ಥಾಪಕ (ಎಫ್ & ಎಫ್) ಹನುಮಂತಗೌಡ ಅವರು ಸೆಪ್ಟೆಂಬರ್ 3ರಂದು ಕರ್ತವ್ಯಕ್ಕೆ ಹಾಜರಾಗಿದ್ದು, ಈ ಪ್ರಕರಣಕ್ಕೂ ಅವರಿಗೂ ಸಂಬಂಧವಿಲ್ಲ ಎಂದು ಸತ್ಯನಾರಾಯಣ ತಿಳಿಸಿದರು.

**ಸಮಗ್ರ ಲೆಕ್ಕಪರಿಶೋಧನೆಗೆ ಆದೇಶ :**

2022ರಿಂದ 2026ರವರೆಗಿನ ರೈತ ಕಲ್ಯಾಣ ಟ್ರಸ್ಟ್ ಮತ್ತು ರಾಸು ವಿಮೆಗೆ ಸಂಬಂಧಿಸಿದ ಎಲ್ಲ ವಹಿವಾಟುಗಳ ಸಮಗ್ರ ಲೆಕ್ಕಪರಿಶೋಧನೆ ನಡೆಸಲು ಸನ್ನದು ಲೆಕ್ಕಪರಿಶೋಧಕರಿಗೆ ಸೂಚಿಸಲಾಗಿದೆ. ವಿಶೇಷ ಉಪಸಮಿತಿಯ ತನಿಖೆ ಪೂರ್ಣಗೊಂಡ ಬಳಿಕ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ಮುಂದಿನ ದಿನಗಳಲ್ಲಿ ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ, ಸಂಬಂಧಪಟ್ಟ ಅಧಿಕಾರಿಗಳ ಪರಿಶೀಲನೆಯ ನಂತರ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಅರ್ಹ ಫಲಾನುಭವಿ ರೈತರ ಬ್ಯಾಂಕ್ ಖಾತೆಗಳಿಗೆ ವಿಮಾ ಪರಿಹಾರ ಜಮೆ ಮಾಡುವ ವ್ಯವಸ್ಥೆ ಜಾರಿಗೊಳಿಸಲಾಗುವುದು.

ಇದರಿಂದ ವಿಮಾ ಪರಿಹಾರ ವಿತರಣೆಯಲ್ಲಿ ಪಾರದರ್ಶಕತೆ ಹೆಚ್ಚಿಸಿ, ರೈತರಿಗೆ ಸಕಾಲದಲ್ಲಿ ಹಣ ತಲುಪಿಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವ್ಯವಸ್ಥಾಪಕ ನಿರ್ದೇಶಕ ಎಸ್. ಸುದರ್ಶನರೆಡ್ಡಿ, ನಿರ್ದೇಶಕರಾದ ಕೃಷ್ಣಾರೆಡ್ಡಿ, ಮರಳು ಸಿದ್ದಪ್ಪ, ಮಂಜುನಾಥ, ಪ್ರವೀಣ್ ಕುಮಾರ್ ಮತ್ತು ಅಮರ ಗುಂಡಪ್ಪ ಉಪಸ್ಥಿತರಿದ್ದರು.

# ನಾಗೇನಹಳ್ಳಿಯಲ್ಲಿ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ



**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ :** ವಿಜಯನಗರ ಜಿಲ್ಲಾ ಪಂಚಾಯಿತಿ ಸಿಇಒ ನಿರ್ದೇಶನ ಮತ್ತು ತಾ.ಪಂ. ಇಒ ಮಾರ್ಗದರ್ಶನದಂತೆ ಹೊಸಪೇಟೆ ತಾಲೂಕು ನಾಗೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕೂಲಿಕಾರರ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಯಿತು.

ಗ್ರಾಮದ ಹೊರವಲಯ ಗುಡಿಒಬಳಾಪುರದ ಬಿ.ರಾಘವೇಂದ್ರ ಭಟ್ ತಂದೆ ಬಿ.ರಾಮಚಂದ್ರಪ್ಪ ಹೊಲದ ಸರ್ವೆ ನಂ.2/1ರಲ್ಲಿ ವಿಬಿಜಿ ರಾಮ್ ಜಿ ಯೋಜನೆಯಡಿ ಕಾಂಟೂರ್ ಟ್ರೆಂಚ್ ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಶನಿವಾರ ಶಿಬಿರ ನಡೆಸಲಾಯಿತು. 68 ಜನರಿಗೆ ತಪಾಸಣೆ ಮಾಡಲಾಯಿತು.

ಗ್ರಾಮ ಪಂಚಾಯಿತಿ ಮತ್ತು ಆರೋಗ್ಯ ಇಲಾಖೆ ಸಹಯೋಗದಲ್ಲಿ ನಡೆದ ಶಿಬಿರದಲ್ಲಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ವಾಂತಿ–ಭೇದಿ ತಪಾಸಣೆ ಮಾಡಲಾಯಿತು. ಬಿಸಿಲಿನ ತಾಪದಿಂದ ತಲೆಸುತ್ತು, ಬಿಪಿ ಹೆಚ್ಚಳದಂತಹ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ, ದಿನವಿಡೀ ಕೆಲಸದಲ್ಲಿ ತೊಡಗಿರುವ ಕೂಲಿಕಾರರು ಆಸ್ಪತ್ರೆಗೆ ಹೋಗಲು ಸಮಯದ ಕೊರತೆ ಎದುರಿಸುತ್ತಾರೆ ಎಂದು ತಾ.ಪಂ. ಐಇಸಿ ಸಂಯೋಜಕರು ತಿಳಿಸಿದರು.

ಡಾ.ಸಿ.ಬಸವರಾಜ್, ಆಡಳಿತ ವೈದ್ಯಾಧಿಕಾರಿ ಮಾತನಾಡಿ, ಸಣ್ಣಪುಟ್ಟ ಕಾಯಿಲೆ ಎಂದು ನಿರ್ಲಕ್ಷಿಸಬೇಡಿ, ಕಾಲಕಾಲಕ್ಕೆ ಬಿಪಿ, ಮಧುಮೇಹ ತಪಾಸಣೆ ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಮಾಡಿಸಿಕೊಳ್ಳಿ, ಹಾವು ಕಡಿತ ಬಗ್ಗೆ ಎಚ್ಚರಿಕೆ ವಹಿಸಿ ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದೇವೇಂದ್ರಪ್ಪ ತಳವಾರ, ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಪತಿ, ಸಮುದಾಯ ಆರೋಗ್ಯಾಧಿಕಾರಿಗಳಾದ ರಾಜೇಶ್ ಬಾಬು, ಮಂಜುನಾಥ, ಆಶಾ ಕಾರ್ಯಕರ್ತೆಯರು ಇದ್ದರು. ಕಾರ್ಯದರ್ಶಿ ಎ.ಎಂ.ನಾಗರಾಜಸ್ವಾಮಿ, ತಾ.ಪಂ. ಐಇಸಿ ಸಂಯೋಜಕ ಎಚ್.ನಾಗರಾಜ, ಡಿಇಒ ಜಗದೀಶ್, ಬಿಸಿ ದುರುಗಪ್ಪ, ಬಿಎಫ್ಟಿ ಶಿವಾನಂದ, ಜಿಕೆಎಂ ಮಂಗಳಮ್ಮ, ಗ್ರಾ.ಪಂ. ಸಿಬ್ಬಂದಿ, ಕೂಲಿ ಕಾರ್ಮಿಕರು ಹಾಜರಿದ್ದರು.

# ಹಾಸನಾಂಬ ದರ್ಶನಕ್ಕೆ ವಿಶೇಷ ರೈಲು ವ್ಯವಸ್ಥೆ

**ಹಾಸನ:** ಈ ಬಾರಿ ಹಾಸನಾಂಬ ದೇವಿ ದರ್ಶನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿರುವ ಹಿನ್ನೆಲೆಯಲ್ಲಿ ನೈರುತ್ಯ ರೈಲ್ವೆ ವತಿಯಿಂದ ವಿಶೇಷ ರೈಲುಗಳ ವ್ಯವಸ್ಥೆ ಮಾಡಿದೆ.



ಬೆಂಗಳೂರು–ಹಾಸನ, ಬೆಂಗಳೂರು–ಅರಸೀಕೆರೆ, ಹಾಸನ–ಅರಸೀಕೆರೆ ಮಾರ್ಗವಾಗಿ 2 ವಿಶೇಷ ರೈಲುಗಳ ಸಂಚಾರಕ್ಕೆ ವ್ಯವಸ್ಥೆ ಮಾಡಿದೆ. ಬೆಂಗಳೂರು–ಹಾಸನ–ಬೆಂಗಳೂರು ಎಕ್ಸ್‌ಪ್ರೆಸ್ ವಿಶೇಷ ರೈಲು ಇದೇ 29 ರಿಂದ ನ.11 ರವರೆಗೆ ಪ್ರತೀದಿನ ಸಂಚರಿಸಲಿದೆ.

ರೈಲು ಬೆಳಿಗ್ಗೆ 7.30ಕ್ಕೆ ಬೆಂಗಳೂರಿನಿಂದ ಹೊರಟು 11.30ಕ್ಕೆ ಹಾಸನ ತಲುಪಲಿದೆ. ಮಧ್ಯಾಹ್ನ 3.15ಕ್ಕೆ ಹಾಸನ ಬಿಟ್ಟು ರಾತ್ರಿ 7 ಗಂಟೆಗೆ ಬೆಂಗಳೂರು ತಲುಪಲಿದೆ. ಈ ರೈಲು ಯಶವಂತಪುರ, ನೆಲಮಂಗಲ, ಕುಣಿಗಲ್, ಯಡಿಯೂರು ಮತ್ತಿತರ ನಿಲ್ದಾಣಗಳಲ್ಲಿ ನಿಲ್ಲಿಸಲಾಗುವುದು ಎಂದು ರೈಲ್ವೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಜಾತಿ ನಿಂದನೆ ಆರೋಪ: ಪತ್ರಕರ್ತೆ ಮತ್ತು ಅಭಿಜೀತ್ ದಿಪ್ಕೆ ವಿರುದ್ಧ ಎಸಿಪಿ ವಿವೇಕ್ ಭಗತ್ ದೂರು

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ತನ್ನ ಮೇಲೆ ಲೈಂಗಿಕ ಕಿರುಕುಳದ ಸುಳ್ಳು ಆರೋಪ ಹೊರಿಸಿ ತೇಜೋವಧೆ ಮಾಡಲಾಗಿದೆ ಹಾಗೂ ಜಾತಿ ನಿಂದನೆ ಮಾಡಲಾಗಿದೆ ಎಂದು ಆರೋಪಿಸಿ ಸಹಾಯಕ ಪೊಲೀಸ್ ಆಯುಕ್ತ ವಿವೇಕ್ ಭಗತ್ ಅವರು ಮಹಿಳಾ ಪತ್ರಕರ್ತೆ ಮತ್ತು ಕಾಕ್ರೋಚ್ ಜನತಾ ಪಾರ್ಟಿ ನಾಯಕರ ವಿರುದ್ಧ ಪ್ರತಿದೂರು ದಾಖಲಿಸಿದ್ದಾರೆ.



ದೂರಿನನ್ವಯ ಪತ್ರಕರ್ತೆ ಸೇರಿದಂತೆ ಸಿಜೆಪಿ ಸಂಸ್ಥಾಪಕ ಅಭಿಜೀತ್ ದಿಪ್ಕೆ, ವಕ್ತಾರರಾದ ಸೌರವ್ ದಾಸ್, ಆಶುತೋಷ್ ರಾಂಕಾ ಹಾಗೂ ರತ್ನಾ ಸಿಂಗ್ ವಿರುದ್ಧ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆ, ಮಾನನಷ್ಟ ಹಾಗೂ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪಗಳಡಿ ಎಫ್‌ಐಆರ್ ದಾಖಲಾಗಿದೆ. ಅಕ್ಟೋಬರ್ 3 ರಂದು ಕರ್ತವ್ಯದಲ್ಲಿದ್ದಾಗ ಬೂಟಾ ಸಿಂಗ್ ರೌಂಡ್‌ಅಬೌಟ್ ಬಳಿ ಪತ್ರಕರ್ತೆಯು ತನ್ನ ಜಾತಿಯನ್ನು ಉಲ್ಲೇಖಿಸಿ ಸಾರ್ವಜನಿಕವಾಗಿ ಅವಹೇಳನ ಮಾಡಿದ್ದಲ್ಲದೆ, ಎಸಿಪಿ ಹುದ್ದೆಯ ನೇಮಕಾತಿಯನ್ನು ಪ್ರಶ್ನಿಸಿದ್ದರು ಎಂದು ಭಗತ್ ಆರೋಪಿಸಿದ್ದಾರೆ.

ಬಳಿಕ ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯುವ ಸಂದರ್ಭದಲ್ಲಿ ಆಕೆ ತನ್ನ ಮೇಲೆ ಲೈಂಗಿಕ ದೌರ್ಜನ್ಯದ ಆರೋಪ ಹೊರಿಸಿ ಕರ್ತವ್ಯಕ್ಕೆ ಅಡ್ಡಿಪಡಿಸಿದರು ಎಂದು ಭಗತ್ ಹೇಳಿದ್ದಾರೆ. ಅದೇ ಸಂಜೆ ಪಾರ್ಲಿಮೆಂಟ್ ಸ್ಟ್ರೀಟ್ ಪೊಲೀಸ್ ಠಾಣೆಯ ಮುಂದೆ ಪ್ರತಿಭಟನೆ ನಡೆಸಿ, ತನ್ನನ್ನು ಲೈಂಗಿಕ ಪರಭಕ್ಷಕ ಎಂದು ಬಿಂಬಿಸಲಾಯಿತು. ಈ ಆರೋಪಗಳನ್ನು ಒಳಗೊಂಡ ವಿಡಿಯೋ ಮತ್ತು ಪೋಸ್ಟ್‌ಗಳನ್ನು ಸಿಜೆಪಿ ನಾಯಕರು ಎಕ್ಸ್ ಮತ್ತು ಇನ್‌ಸ್ಟಾಗ್ರಾಮ್‌ನಲ್ಲಿ ವ್ಯವಸ್ಥಿತವಾಗಿ ಹಂಚಿಕೊಂಡು ತಮ್ಮ ಘನತೆಗೆ ಧಕ್ಕೆ ತಂದಿದ್ದಾರೆ ಎಂದು ಅವರು ದೂರಿದ್ದಾರೆ. ಪತ್ರಕರ್ತೆ ನೀಡಿದ್ದ ಲೈಂಗಿಕ ಕಿರುಕುಳದ ದೂರನ್ನು ಈಗಾಗಲೇ ದೆಹಲಿ ಪೊಲೀಸ್ ಅಪರಾಧ ವಿಭಾಗದ (ಕ್ರೈಂ ಬ್ರಾಂಚ್) ತನಿಖೆಗೆ ಒಪ್ಪಿಸಲಾಗಿದೆ. ಇತ್ತೀಚೆಗಷ್ಟೇ ಭಗತ್ ಅವರಿಗೆ ಹೆಚ್ಚುವರಿ ಡಿಸಿಪಿ ಹುದ್ದೆಗೆ ನೀಡಲಾಗಿದ್ದ ಬಡ್ತಿಯನ್ನು ಈ ವಿವಾದದ ಹಿನ್ನೆಲೆಯಲ್ಲಿ ತಡೆಹಿಡಿಯಲಾಗಿದೆ. ಈ ಪ್ರಕರಣದ ಸಮಗ್ರ ತನಿಖೆ ಪೂರ್ಣಗೊಳ್ಳುವವರೆಗೂ ತಾತ್ಕಾಲಿಕ ಹೆಚ್ಚುವರಿ ಕಾರ್ಯಭಾರವನ್ನು ಸ್ವೀಕರಿಸುವುದಿಲ್ಲ ಎಂದು ಸ್ವತಃ ವಿವೇಕ್ ಭಗತ್ ಅವರೇ ವಿನಂತಿಸಿಕೊಂಡಿದ್ದಾರೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಇದಕ್ಕೂ ಮುನ್ನ ಜೂನ್ ತಿಂಗಳಲ್ಲಿ ನಡೆದ ಸಿಜೆಪಿ ಪ್ರತಿಭಟನೆಯ ವೇಳೆಯೂ ಉದ್ರಿಕ್ತ ಗುಂಪೊಂದು ಭಗತ್ ಅವರನ್ನು ಸುತ್ತುವರಿದು ತೀವ್ರವಾಗಿ ಹಲ್ಲೆ ನಡೆಸಿತ್ತು. ಅಂದು ಗಂಭೀರ ಗಾಯಗೊಂಡಿದ್ದ ಅವರನ್ನು ಹಿರಿಯ ಅಧಿಕಾರಿಗಳು ರಕ್ಷಿಸಿದ್ದರು. ಇದೀಗ ಮತ್ತೆ ಅದೇ ಸಂಘಟನೆಯ ಮುಖಂಡರು ಹಾಗೂ ಪತ್ರಕರ್ತೆ ಉದ್ದೇಶಪೂರ್ವಕವಾಗಿ ತಮ್ಮ ವಿರುದ್ಧ ಪಿತೂರಿ ನಡೆಸಿ ತೇಜೋವಧೆ ಮಾಡುತ್ತಿದ್ದಾರೆ ಎಂದು ಭಗತ್ ತಮ್ಮ ದೂರಿನಲ್ಲಿ ತೀವ್ರ ಆಕ್ರೋಶ ಹೊರಹಾಕಿದ್ದಾರೆ.

# ಕೈದಿಗಳ ಉತ್ಪನ್ನಗಳಿಗೆ ಆಕರ್ಷಕ ಪ್ಯಾಕೇಜಿಂಗ್, ಮಾರುಕಟ್ಟೆ ವಿಸ್ತರಣೆಗೆ ಕ್ರಮ: ಸಚಿವ ಪ್ರಿಯಾಂಕ್

**ಬೆಂಗಳೂರು:** ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿಯ 5ನೇ ಸಭೆಯು ಮಂಡಳಿಯ ಅಧ್ಯಕ್ಷರೂ ಆಗಿರುವ ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ಬುಧವಾರ ಜರುಗಿ–ತು. ರಾಜ್ಯದ ಕಾರಾಗೃಹಗಳಲ್ಲಿ ಕೈದಿಗಳಿಂದ ತಯಾರಿಸಲಾಗುತ್ತಿರುವ ವಿವಿಧ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಿ, ಆಕರ್ಷಕ ಪ್ಯಾಕೇಜಿಂಗ್‌ನೊಂದಿಗೆ ಮಾರುಕಟ್ಟೆಗೆ ಪರಿಚಯಿಸುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಸಚಿವರು, ಅಧಿಕಾರಿಗಳಿಗೆ ಸೂಚಿಸಿದರು.



ಕೈದಿಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸುವುದು, ಅವುಗಳ ಮಾರಾಟವನ್ನು ಹೆಚ್ಚಿಸುವುದು ಹಾಗೂ ಈ ಮೂಲಕ ಕಾರಾಗೃಹ ಅಭಿವೃದ್ಧಿ ಮಂಡಳಿಯನ್ನು ಸ್ವಾವಲಂಬಿಯಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಅಗತ್ಯ ಕಾರ್ಯಕ್ರಮಗಳನ್ನು ರೂಪಿಸುವಂತೆ ಅವರು ನಿರ್ದೇಶನ ನೀಡಿದರು.

ಕೈದಿಗಳ ಕೌಶಲಾಭಿವೃದ್ಧಿ ಮತ್ತು ಪುನರ್ವಸತಿಗೆ ಪೂರಕವಾದ ಚಟುವಟಿಕೆಗಳನ್ನು ಬಲಪಡಿಸುವುದರ ಜತೆಗೆ, ಅವರು ತಯಾರಿಸುವ ಉತ್ಪನ್ನಗಳಿಗೆ ಸ್ಥಿರವಾದ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು ಮುಖ್ಯವಾಗಿದೆ. ಉತ್ಪನ್ನಗಳ ಗುಣಮಟ್ಟ, ಆಕರ್ಷಕ ಪ್ಯಾಕೇಜಿಂಗ್ ಮತ್ತು ಪರಿಣಾಮಕಾರಿ ಮಾರುಕಟ್ಟೆ ವ್ಯವಸ್ಥೆಯ ಮೂಲಕ ಅವುಗಳಿಗೆ ಹೆಚ್ಚಿನ ಬೇಡಿಕೆ ಸೃಷ್ಟಿಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಸಭೆಯಲ್ಲಿ ಕಾರಾಗೃಹಗಳಲ್ಲಿ ಕಲಾ ಚಿಕಿತ್ಸಾ ಕಾರ್ಯಕ್ರಮಗಳ ಅನುಷ್ಠಾನ, ಕೈದಿಗಳ ಮಾನಸಿಕ ಪರಿವರ್ತನೆ ಮತ್ತು ಪುನರ್ವಸತಿಗಾಗಿ ಸ್ವಯಂಸೇವಾ ಸಂಸ್ಥೆಗಳ ಸಹಯೋಗ, ವ್ಯಸನಮುಕ್ತ ಕೇಂದ್ರಗಳ ಸ್ಥಾಪನೆ ಹಾಗೂ ಕಾರಾಗೃಹಗಳಲ್ಲಿ ಉತ್ಪಾದನೆಯಾಗುವ ವಸ್ತುಗಳ ಮಾರಾಟ ವ್ಯವಸ್ಥೆಯನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು.

ಇದಲ್ಲದೆ, ಕಾರಾಗೃಹಗಳ ಮೂಲಸೌಕರ್ಯ ಅಭಿವೃದ್ಧಿ, ಕೈದಿಗಳ ಕೌಶಲಾಭಿವೃದ್ಧಿಗೆ ಆಧುನಿಕ ವೃತ್ತಿಪರ ತರಬೇತಿ ಒದಗಿಸುವುದು ಹಾಗೂ ವಿವಿಧ ಕಾರಾಗೃಹಗಳಲ್ಲಿ ಉತ್ಪಾದನಾ ಮತ್ತು ಮಾರಾಟ ಚಟುವಟಿಕೆಗಳನ್ನು ವಿಸ್ತರಿಸುವ ಕುರಿತು ಸಭೆಯಲ್ಲಿ ಪರಿಶೀಲಿಸಲಾಯಿತು.

ಕೈದಿಗಳ ಪುನರ್ವಸತಿ, ಕೌಶಲಾಭಿವೃದ್ಧಿ ಮತ್ತು ಉತ್ಪಾದನಾ ಚಟುವಟಿಕೆಗಳಿಗೆ ಉತ್ತೇಜನ ನೀಡುವುದರ ಜತೆಗೆ, ಕಾರಾಗೃಹ ಅಭಿವೃದ್ಧಿ ಮಂಡಳಿಯ ಆದಾಯವನ್ನು ಹೆಚ್ಚಿಸಿ, ಮಂಡಳಿಯು ಸ್ವಾವಲಂಬಿಯಾಗಿ ಕಾರ್ಯನಿರ್ವಹಿಸಲು ಅಗತ್ಯವಾದ ಯೋಜನೆಗಳನ್ನು ರೂಪಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿಯ ಸಭೆಗೆ ಹಾಜರಾಗುವಂತೆ ಸೂಚನೆ ನೀಡಿದ್ದರೂ, ಆರೋಗ್ಯ, ಪಶುಸಂಗೋಪನೆ, ಕೃಷಿ, ತೋಟಗಾರಿಕೆ ಹಾಗೂ ಕೈಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರು ಸಭೆಗೆ ಗೈರುಹಾಜರಾಗಿ, ತಮ್ಮ ಬದಲಿಗೆ ಕಿರಿಯ ಅಧಿಕಾರಿಗಳನ್ನು ಕಳುಹಿಸಿದ್ದಕ್ಕೆ ಮಂಡಳಿಯ ಅಧ್ಯಕ್ಷರೂ ಆಗಿರುವ ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಭೆಯ ಮಹತ್ವವನ್ನು ಅರಿತು ಇಲಾಖಾ ಮುಖ್ಯಸ್ಥರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಹಾಗೂ ಸಭೆಗಳಿಗೆ ಖುದ್ದು ಹಾಜರಾಗಿ ಅಗತ್ಯ ನಿರ್ಧಾರಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ ಸಚಿವರು, ಸಭೆಗೆ ಹಾಜರಾಗಿದ್ದ ಕಿರಿಯ ಅಧಿಕಾರಿಗಳನ್ನು ಸಭೆಯಿಂದ ಹೊರಗೆ ಕಳುಹಿಸಿದರು.

ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಠಾರಿಯ, ಕರ್ನಾಟಕದ ಪೊಲೀಸ್ ಮಹಾ ನಿರ್ದೇಶಕ ಡಾ.ಎ.ಸಲೀಂ, ಪೊಲೀಸ್ ಮಹಾ ನಿರ್ದೇಶಕ (ಕಾರಾಗೃಹ) ಅಲೋಕ್ ಕುಮಾರ್, ಗೃಹ ಇಲಾಖೆಯ ಕಾರ್ಯದರ್ಶಿ ಶರಶ್ಚಂದ್ರ ಹಾಗೂ ಇನ್ನಿತರ ಅಧಿಕಾರಿಗಳು ಮಂಡಳಿ ಸಭೆಯಲ್ಲಿ ಭಾಗವಹಿಸಿದ್ದರು.

# ಸುಪ್ರೀಂಕೋರ್ಟ್‌ಗೆ ನನ್ನ ಬಗ್ಗೆ ತಪ್ಪು ಮಾಹಿತಿ: ಸರ್ಕಾರದ ವಿರುದ್ಧ ಡಿಜಿಪಿ ಅಲೋಕ್ ಕುಮಾರ್ ಅಸಮಾಧಾನ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಕ್ರಮಗಳ ತನಿಖೆಗಾಗಿ ಕರ್ನಾಟಕ ಹೈಕೋರ್ಟ್ ತಮ್ಮನ್ನು ಎಸ್‌ಐಟಿ ಮುಖ್ಯಸ್ಥರನ್ನಾಗಿ ನೇಮಿಸಿದ್ದನ್ನು ರಾಜ್ಯ ಸರ್ಕಾರ ಆಕ್ಷೇಪಿಸಿದ ರೀತಿಯ ಬಗ್ಗೆ ಕರ್ನಾಟಕ ಡಿಜಿಪಿ (ಜೈಲು) ಅಲೋಕ್ ಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಅಲೋಕ್ ಕುಮಾರ್ ನೇತೃತ್ವದ ಎಸ್‌ಐಟಿ ತಂಡ ರಚನೆಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಹೀಗಾಗಿ ಅಕ್ಟೋಬರ್ 1ರಂದು ಸುಪ್ರೀಂ ಕೋರ್ಟ್ ವಿಚಾರಣೆ ವೇಳೆ ಸರ್ಕಾರ ಪರ ವಾದ ಮಂಡಿಸಿದ್ದ ಕಪಿಲ್ ಸಿಬಲ್, ಅಲೋಕ್ ಕುಮಾರ್ ಅವರ ವಿರುದ್ಧ ಸಿಬಿಐ ತನಿಖೆ ಬಾಕಿ ಇದೆ ಎಂದು ವಾದಿಸಿದ್ದರು. ಈ ವಾದವನ್ನು ಖಂಡಿಸಿ ಅಲೋಕ್ ಕುಮಾರ್ ಅವರು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

ತಮ್ಮ ವಿರುದ್ಧ ಸಿಬಿಐ ತನಿಖೆ ಬಾಕಿಯಿದೆ ಎಂದು ಸುಪ್ರೀಂ ಕೋರ್ಟ್‌ಗೆ ಸರ್ಕಾರ ಸಲ್ಲಿಸಿದ್ದ ಮಾಹಿತಿಯನ್ನು ತಿದ್ದುಪಡಿ ಮಾಡುವಂತೆ ಅಕ್ಟೋಬರ್ 5ರಂದು ಕರ್ನಾಟಕ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದರು. ಈ ಹೇಳಿಕೆಯು ವಾಸ್ತವಿಕವಾಗಿ ತಪ್ಪಾಗಿದೆ ಎಂದು ಕುಮಾರ್ ಪ್ರತಿಪಾದಿಸಿದ್ದರು. ಸರ್ಕಾರ ಸಲ್ಲಿಸಿದ ಈ ಮಾಹಿತಿಯು ಅನಗತ್ಯವಾಗಿ ತಮ್ಮ ಹೆಸರನ್ನು ವಿವಾದಕ್ಕೆ ಎಳೆತಂದಿದೆ. ತಮ್ಮ ವೃತ್ತಿಪರ ಪ್ರಾಮಾಣಿಕತೆ ಹಾಗೂ ಘನತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಅಲೋಕ್ ಕುಮಾರ್ ಹೇಳಿದ್ದಾರೆ.

ಅಲೋಕ್ ಕುಮಾರ್ ಬೆಂಗಳೂರು ಪೊಲೀಸ್ ಆಯುಕ್ತರಾಗಿದ್ದ ಅವಧಿಯಲ್ಲಿ ನಡೆದಿದೆ ಎನ್ನಲಾದ ಫೋನ್ ಕದ್ದಾಲಿಕೆ ಆರೋಪಗಳ ಕುರಿತು ಸಿಬಿಐ ತನಿಖೆ ಬಾಕಿಯಿದೆ ಎಂಬ ಕಾರಣವೊಡ್ಡಿ ಎಸ್‌ಐಟಿ ನೇತೃತ್ವದಿಂದ ತಮ್ಮ ನೇಮಕವನ್ನು ರಾಜ್ಯ ಸರ್ಕಾರ ವಿರೋಧಿಸಿತ್ತು.

ಫೋನ್ ಕದ್ದಾಲಿಕೆ ಆರೋಪಕ್ಕೆ ಸಂಬಂಧಿಸಿದಂತೆ ಸಿಬಿಐ ಈಗಾಗಲೇ 'ಬಿ–ರಿಪೋರ್ಟ್' ಸಲ್ಲಿಸಿದ್ದು, ಅದನ್ನು 2024ರ ಫೆಬ್ರುವರಿ 13ರಂದು ಸಿಬಿಐ ವಿಶೇಷ ನ್ಯಾಯಾಲಯ ಪುರಸ್ಕರಿಸಿದೆ. ಅಷ್ಟೇ ಅಲ್ಲದೆ, ಈ ವಿಷಯದಲ್ಲಿ ಇಲಾಖಾ ವಿಚಾರಣೆ ನಡೆಸುವ ಅಗತ್ಯವಿಲ್ಲವೆಂದು 2023ರಲ್ಲಿಯೇ ಅಂದಿನ ಮುಖ್ಯಮಂತ್ರಿಗಳು ಸ್ಪಷ್ಟ ಆದೇಶ ಹೊರಡಿಸಿದ್ದರು. ಅಲ್ಲದೆ ಈ ಹಿಂದೆ ಈ ಪ್ರಕರಣದಲ್ಲಿ ಹೊರಡಿಸಲಾಗಿದ್ದ ಶೋಕಾಸ್ ನೋಟಿಸ್ ಮತ್ತು ಚಾರ್ಜ್‌ಶೀಟ್‌ನ್ನು ಕೇಂದ್ರೀಯ ಆಡಳಿತಾತ್ಮಕ ಮಂಡಳಿ ರದ್ದುಗೊಳಿಸಿದ್ದು, ಆ ಆದೇಶಕ್ಕೆ ಹೈಕೋರ್ಟ್ ಕೂಡ ತಡೆ ನೀಡಿಲ್ಲ ಎಂಬುದನ್ನು ಪತ್ರದಲ್ಲಿ ಅಲೋಕ್ ಕುಮಾರ್ ಉಲ್ಲೇಖಿಸಿದ್ದಾರೆ.

ಸುಪ್ರೀಂ ಕೋರ್ಟ್ ಮುಂದೆ ಪ್ರಸ್ತಾಪಿಸಲಾದ ವಿಷಯಕ್ಕೆ ಸಂಬಂಧಿಸಿದಂತೆ, ಇಂದು ನನ್ನ ವಿರುದ್ಧ ಯಾವುದೇ ಸಿಬಿಐ ತನಿಖೆ ಅಥವಾ ವಿಚಾರಣೆ, ಅಥವಾ ಇಲಾಖಾ ವಿಚಾರಣೆ ಅಥವಾ ಯಾವುದೇ ಪ್ರಕ್ರಿಯೆ ಬಾಕಿಯಿಲ್ಲ.

ಹೀಗಾಗಿ ಅಫಿಡವಿಟ್‌ನಲ್ಲಿ ತಮ್ಮ ಕುರಿತು ಯಾವುದೇ ತಪ್ಪಾದ ಅಥವಾ ಪರಿಶೀಲಿಸದ ಆರೋಪಗಳನ್ನು ಸೇರಿಸಬಾರದೆಂದೂ ಹಾಗೂ ವಾಸ್ತವಿಕ ಸಂಗತಿಗಳನ್ನು ಸುಪ್ರೀಂ ಕೋರ್ಟ್‌ನ ಮುಂದೆ ಸರಿಯಾಗಿ ಮಂಡಿಸಬೇಕೆಂದೂ ಅವರು ಮನವಿ ಮಾಡಿದರು.

# ಯುವ ದಸರಾದಲ್ಲಿ ಕಿಕ್ಕೇರಿಸಿದ ಗಾಯಕ ಶಂಕರ್ ಮಹದೇವನ್ ಅವರ ಕಂಠಸಿರಿ

**ಮೈಸೂರು:** ಏಕದಂತಾಯ ವಕ್ರತುಂಡಾಯ ಗೌರಿತನಯ ಯದೀಮಹಿ ಎಂಬ ಗಣೇಶನ ಶ್ಲೋಕ ಹಾಗೂ ಓಂ ನಮಃ ಶಿವಾಯ ಎಂದು ಶಿವನ ಶ್ಲೋಕ ಹಾಡುವ ಮೂಲಕ ಕಂಚಿನ ಕಂಠದ ಬಾಲಿವುಡ್ ಗಾಯಕ ಶಂಕರ್ ಮಹದೇವನ್ ಅವರು ಯುವ ದಸರಾ ವೇದಿಕೆಯಲ್ಲಿ ಕಿಚ್ಚೆಬ್ಬಿಸಿದರು.



ನಗರದ ಉತ್ತನಹಳ್ಳಿ ಜ್ವಾಲಾಮುಖಿ ತ್ರಿಪುರ ಸುಂದರಿ ದೇವಸ್ಥಾನ ಹತ್ತಿರದ ಮೈದಾನದಲ್ಲಿ ನಡೆಯುತ್ತಿರುವ ಯುವ ದಸರಾ ಕಾರ್ಯಕ್ರಮದ ಎರಡನೇ ದಿನ ಶಂಕರ್ ಮಹದೇವನ್ ತಂಡವು ಹಾಡಿದ ಡ್ಯಾನ್ಸ್ ವಿತ್ ಬೇಬಿ, ಕೋಯಿ ಕಹೆ ರಹತಾ ರಹೇ, ಬೋಲ ಹಲ್ಗೆ ಹಲ್ಗೆ ಹಿಂದಿ ಗಾಯನದ ಮೋಡಿಗೆ ಕಿಕ್ಕಿರಿದು ತುಂಬಿದ್ದ ಮೈದಾನದಲ್ಲಿ ಯುವ ಸಮೂಹದ ಸಂಭ್ರಮ ಮುಗಿಲು ಮುಟ್ಟಿತ್ತು.

ಕನ್ನಡ ಹಾಡುಗಳುಗೆ ಫಿದಾ: ಭಜರಂಗಿ ಸಿನಿಮಾದ ಜೈ ಜೈ ಭಜರಂಗಿ, ಮಾಣಿಕ್ಯ ಸಿನಿಮಾದ ಜೀವ ಜೀವ ನಮ್ ಜೀವ ಕಣೋ ಇವನು, ರಾಜ್ ಸಿನಿಮಾದ ಮುತ್ತು ರಾಜ ಕಾಲಿಟ್ಟ ಸೈಡು ಬಿಡಲೇ ಹಾಗೂ ಇನ್ನಿತರ ಕನ್ನಡ ಹಾಡುಗಳನ್ನು ಹಾಡಿ ರಂಜಿಸಿದರು.ಹಿಂದಿ ಸರಿಗಮಪ ಖ್ಯಾತಿಯ ಜ್ಯೋತಿರ್ಮಯಿ ನಾಯಕ್ ಕೂಡ ಹಲವಾರು ಹಿಂದಿ ಗೀತೆಗಳನ್ನು ಹಾಡುವ ಮೂಲಕ ಪ್ರೇಕ್ಷಕರನ್ನು ರಂಜಿಸಿದರು.

ಶಂಕರ್ ಮಹದೇವನ್ ಗಾಯನ ಆಲಿಸಲು ಬಂದಿದ್ದ ನಗರ ಪಾಲಿಕೆ ಆಯುಕ್ತರಾದ ಎಂ.ಕೆ.ಸವಿತಾ ಹಾಗೂ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅವರು ಎದ್ದು ಸ್ಟೆಪ್ ಹಾಕಿ ಎಲ್ಲರ ಗಮನ ಸೆಳೆದರು.ಈ ವೇಳೆ ನಗರಾಭಿವೃದ್ಧಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ ತನ್ವೀರ್ ಸೇಠ್ ಹಾಗೂ ಸಂಸದ ಸುನೀಲ್ ಬೋಸ್ ಹಾಜರಿದ್ದರು.

# ಅ.28ರೊಳಗೆ ದೇಶ ತೊರೆಯುವಂತೆ ನಟ ಇಮ್ರಾನ್ ಖಾನ್‌ಗೆ ಪೊಲೀಸರ ಸೂಚನೆ

**ಮುಂಬೈ:** ಬಾಲಿವುಡ್ ಸೂಪರ್ ಸ್ಟಾರ್ ಅಮೀರ್ ಖಾನ್ ಅವರ ಸೋದರಳಿಯ ಹಾಗು ಚಿತ್ರನಟ ಇಮ್ರಾನ್ ಖಾನ್ ಅವರಿಗೆ ಅ.28ರೊಳಗೆ ದೇಶ ತೊರೆಯುವಂತೆ ಮುಂಬೈ ಪೊಲೀಸರು ಖಡಕ್ ಎಚ್ಚರಿಕೆ ನೀಡಿದ್ದಾರೆ.



ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆದಿದ್ದ ಪ್ರತಿಭಟನೆಯಲ್ಲಿ ಖಾನ್ ಕಾಣಿಸಿಕೊಂಡಿದ್ದ ವೇಳೆ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದರು.

ಇಮ್ರಾನ್ ಖಾನ್ ಭಾರತೀಯ ಪ್ರಜೆಯಲ್ಲದಿದ್ದರೂ ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ ಎಂಬ ಆರೋಪವಿರುವುದರಿಂದ, ವಲಸೆ ಕಾಯ್ದೆಯ ಸಂಬಂಧಿತ ನಿಬಂಧನೆಗಳ ಅಡಿಯಲ್ಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

ವರದಿಗಳ ಪ್ರಕಾರ, ಇಮ್ರಾನ್ ಖಾನ್ ಅಮೆರಿಕದ ಪ್ರಜೆಯಾಗಿದ್ದು, ಓವರ್‌ಸೀಸ್ ಸಿಟಿಜನ್ ಆಫ್ ಇಂಡಿಯಾ ಕಾರ್ಡ್ ಹೊಂದಿದ್ದಾರೆ.ಇದಕ್ಕೂ ಮುನ್ನ, ಮಾಜಿ ಬಿಜೆಪಿ ಸಂಸದ ಕಿರಿಟ್ ಸೋಮಯ್ಯ ಅವರು ಮುಂಬೈ ಪೊಲೀಸರಿಗೆ ಪತ್ರ ಬರೆದು, ಇಮ್ರಾನ್ ಖಾನ್ ವಿದೇಶಿ ಪ್ರಜೆ ಆಗಿದ್ದರೂ,ಮುಂಬೈನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದಕ್ಕಾಗಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿದ್ದರು.

ಮುಂಬೈ ಜಂಟಿ ಪೊಲೀಸ್ ಆಯುಕ್ತ ಮನೋಜ್ ಕುಮಾರ್ ಶರ್ಮಾ ಅವರಿಗೆ ಬರೆದ ಪತ್ರದಲ್ಲಿ, ಇಂತಹ ಪ್ರತಿಭಟನೆಯಲ್ಲಿ ಭಾಗವಹಿಸಲು ಖಾನ್ ಅವರಿಗೆ ಕಾನೂನುಬದ್ಧ ಅನುಮತಿ ಇದೆಯೇ ಎಂದು ಬಿಜೆಪಿ ನಾಯಕ ಪ್ರಶ್ನಿಸಿದ್ದರು. ಖಾನ್ ಒಬ್ಬ ವಿದೇಶಿ ಪ್ರಜೆ ಎಂದು ಹೇಳಿರುವ ಸೋಮಯ್ಯ, ಪ್ರತಿಭಟನೆಯಲ್ಲಿ ಭಾಗವಹಿಸಲು ಅವರು ಅನುಮತಿ ಪಡೆದಿದ್ದರೇ ಎಂದು ಪ್ರಶ್ನಿಸಿದ್ದಾರೆ.ಈ ವಿಷಯದ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೋಮಯ್ಯ ಮುಂಬೈ ಪೊಲೀಸರನ್ನು ಕೋರಿದ್ದಾರೆ.

# ಪರ್ವಿಂದರ್ ಸಿಂಗ್ ಹತ್ಯೆ : ಪಂಜಾಬ್‌ನಲ್ಲಿ ಭುಗಿಲೆದ್ದ ಆಕ್ರೋಶ, ಆರೋಪಿಯ ಮೆಡಿಕಲ್ ಶಾಪ್‌ಗೆ ಬೆಂಕಿ

**ಚಂಡೀಗಢ:** ಪಂಜಾಬ್‌ನ ಮಾನ್ಸಾ ಜಿಲ್ಲೆಯಲ್ಲಿ ಡ್ರಗ್ಸ್ ವಿರೋಧಿ ಹೋರಾಟಗಾರ ಪರ್ವಿಂದರ್ ಸಿಂಗ್ ಝೋಟಾ ಅವರ ಭೀಕರ ಹತ್ಯೆ ರಾಜ್ಯಾದ್ಯಂತ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಮಾದಕ ದ್ರವ್ಯಗಳ ಅಕ್ರಮ ಮಾರಾಟದ ವಿರುದ್ಧ ಫೇಸ್‌ಬುಕ್‌ನಲ್ಲಿ ಲೈವ್ ವೀಡಿಯೊ ಮಾಡುತ್ತಿದ್ದ ಪರ್ವಿಂದರ ಸೀಂಗ್ ಝೋಟಾ ಅವರನ್ನು ಔಷಧ ಅಂಗಡಿ ಮಾಲೀಕನು ನಿನ್ನೆ ಗುಂಡಿಟ್ಟು ಹತ್ಯೆ ಮಾಡಿದ್ದ.



ಇದೀಗ ಆಕ್ರೋಶಗೊಂಡ ಸಾರ್ವಜನಿಕರು ಮತ್ತು ಬೆಂಬಲಿಗರು ಆರೋಪಿಯ ಮೆಡಿಕಲ್ ಶಾಪ್‌ಗೆ ಬೆಂಕಿ ಹಚ್ಚಿದ್ದು, ಆರೋಪಿಯ ಮನೆ ಹಾಗೂ ಅಂಗಡಿಯ ಅಕ್ರಮ ಭಾಗಗಳನ್ನು ಬುಲ್ಡೋಜರ್‌ನಿಂದ ನೆಲಸಮಗೊಳಿಸಲಾಗಿದೆ.

ಪಂಜಾಬ್‌ನಲ್ಲಿ 'ನಶಾ ರೋ–ಕೋ, ರೋಜ್‌ಗಾರ್ ದೋ' ಅಭಿಯಾನದ ಮೂಲಕ ಪ್ರಸಿದ್ಧರಾಗಿದ್ದ ಮಾಜಿ ಬಾಕ್ಸರ್ ಹಾಗೂ ಡ್ರಗ್ ವಿರೋಧಿ ಹೋರಾಟಗಾರ ಪರ್ವಿಂದರ್ ಸಿಂಗ್ ಝೋಟಾ ಅವರು, ಮಾನ್ಸಾದಲ್ಲಿನ ಮೆಡಿಕಲ್ ಶಾಪ್‌ಗಳಲ್ಲಿ ನಿಷೇಧಿತ ಹಾಗೂ ಮಾದಕ ಮಾತ್ರೆಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿ ಸತತ ಹೋರಾಟ ನಡೆಸುತ್ತಿದ್ದರು. ಈ ವೇಳೆ ಪಂಜಾಬ್‌ನ ಮಾನ್ಸಾ ಜಿಲ್ಲೆಯಲ್ಲಿರುವ ಮೆಡಿಕಲ್ ಶಾಪ್ ಒಂದರಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ತಿಳಿದ ಬಳಿಕ ಪರ್ವಿಂದರ್ ತಮ್ಮ ಸಹಚರರೊಂದಿಗೆ ಮಂಗಳವಾರ ಬೆಳಿಗ್ಗೆ ಅಶ್ವಿನ್ ಕುಮಾರ್ ಎಂಬುವವರ ಮೆಡಿಕಲ್ ಶಾಪ್‌ಗೆ ತೆರಳಿ, ಮಾದಕ ಮಾತ್ರೆಗಳ ಮಾರಾಟ ಕುರಿತು ಪ್ರಶ್ನಿಸುತ್ತಾ ಫೇಸ್‌ಬುಕ್‌ನಲ್ಲಿ ಲೈವ್ ಪ್ರಸಾರ ಮಾಡುತ್ತಿದ್ದರು. ಈ ವೇಳೆ ಇಬ್ಬರ ನಡುವೆ ತೀವ್ರ ಮಾತಿನ ಚಕಮಕಿ ನಡೆದು, ಕೋಪಗೊಂಡ ಅಂಗಡಿ ಮಾಲೀಕ ಅಶ್ವಿನ್ ಕುಮಾರ್ ತನ್ನ ಪಿಸ್ತೂಲ್‌ನಿಂದ ಲೈವ್‌ನಲ್ಲೇ ಝೋಟಾ ಮೇಲೆ ಸತತವಾಗಿ ಗುಂಡು ಹಾರಿಸಿದ್ದಾನೆ. ಝೋಟಾ ಅವರ ಹೊಟ್ಟೆ ಹಾಗೂ ತೊಡೆಗೆ ಮೂರು ಗಂಡುಗಳು ತಾಗಿದ್ದು, ಆಸ್ಪತ್ರೆಗೆ ಸಾಗಿಸುವಷ್ಟರಲ್ಲಿ ಅವರು ಕೊನೆಯುಸಿರೆಳದಿದ್ದರು.

ಝೋಟಾ ಅವರ ಹತ್ಯೆಯ ಸುದ್ದಿ ಹರಡುತ್ತಿದ್ದಂತೆಯೇ ಮಾನ್ಸಾ ನಗರದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ಧಾರ್ಮಿಕ ಸಂಘಟನೆಗಳು ಹಾಗೂ ಸಾರ್ವಜನಿಕರು ನಗರದ ಬಂದ್‌ಗೆ ಕರೆ ನೀಡಿದ್ದರು. ಆಕ್ರೋಶಗೊಂಡಿದ್ದ ಜನರು ಬುಧವಾರ ಬೆಳಿಗ್ಗೆ ಆರೋಪಿ ಅಶ್ವಿನ್ ಕುಮಾರ್‌ಗೆ ಸೇರಿದ ಮೆಡಿಕಲ್ ಸ್ಟೋರ್‌ಗೆ ನುಗ್ಗಿ ಅದನ್ನು ಧ್ವಂಸಗೊಳಿಸಿತಲ್ಲದೆ, ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಇನ್ನೊಂದೆಡೆ, ಪರಿಸ್ಥಿತಿ ಕೈಮೀರುತ್ತಿದ್ದಂತೆ ಸ್ಥಳಕ್ಕ ಬಂದ ಪೊಲೀಸ್‌ರು ಆರೋಪಿಯ ಅಕ್ರಮ ಕಟ್ಟಡ ನಿರ್ಮಾಣದ ವಿರುದ್ಧ ಬುಲ್ಡೋಜರ್ ಕಾರ್ಯಾಚರಣೆ ನಡೆಸಿ ಆಸ್ತಿಯನ್ನು ಭಾಗಶಃ ನೆಲಸಮಗೊಳಿಸಿತು.

ಘಟನೆ ಬಳಿಕ ರಾಜಸ್ಥಾನಕ್ಕೆ ಪಾರರಿಯಾಗಿದ್ದ ಪ್ರಮುಖ ಆರೋಪಿ ಅಶ್ವಿನ್ ಕುಮಾರ್‌ನನ್ನು ಪೊಲೀಸರು ರಾಜಸ್ಥಾನದ ಸಾಲಾಸರ್‌ನಲ್ಲಿ ವಶಕ್ಕೆ ಪಡೆದಿದ್ದಾರೆ. ಈ ಭೀಕರ ಹತ್ಯೆಯಿಂದಾಗಿ ಪಂಜಾಬ್‌ನ ಆಮ್ ಆದ್ಮಿ ಪಾರ್ಟಿ ಸರ್ಕಾರದ ವಿರುದ್ಧ ವಿಪಕ್ಷಗಳು ತೀವ್ರ ಟೀಕೆಯನ್ನು ಮಾಡುತ್ತಿವೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದ್ದು, ಡ್ರಗ್ ಮಾಫಿಯಾ ವಿರುದ್ಧ ಧ್ವನಿ ಎತ್ತುವ ಸಾರ್ವಜನಿಕರಿಗೇ ರಕ್ಷಣೆ ಇಲ್ಲದಂತಾಗಿದೆ ಎಂದು ಬಿಜೆಪಿ ಮತ್ತು ಕಾಂಗ್ರೆಸ್ ನಾಯಕರು ಕಿಡಿಕಾರಿದ್ದಾರೆ.

## ನೆಮ್ಮದಿ ಕಂಡವರ್ಯಾರು ...?
## ನೆಮ್ಮದಿ ಕಂಡವರ್ಯಾರು...?

ಬಡತನದಲ್ಲೊಂದು ಶ್ರೀಮಂತಿಕೆಯಿದೆ...
ಶ್ರೀಮಂತಿಕೆಯೊಳಗೊಂದು ಬಡತನವಿದೆ...
ಶ್ರೀಮಂತನ ಅರಮನೆಯಲ್ಲಿ ನೆಮ್ಮದಿ ಬಡವಾಗಿದೆ...
ಬಡವನ ಗುಡಿಸಲಿನಲ್ಲಿ ನಗುವಿನ ಶ್ರೀಮಂತಿಕೆ ಮನೆ ಮಾಡಿದೆ...
ಶ್ರೀಮಂತನ ಹೊಟ್ಟೆ ತುಂಬಿ ರೋಗ ಬೆಳೆದಿದೆ...
ಬಡವನ ಹೊಟ್ಟೆ ಹಸಿದರೂ, ಉಪವಾಸದ ನೆಪದಲ್ಲಿ ಆರೋಗ್ಯ ಉಳಿದಿದೆ...
ಶ್ರೀಮಂತನ ಕಣ್ಣಿಗೆ ನಿದ್ದೆಯೇ ಅಪರೂಪ...
ಬಡವನಿಗೆ ದಣಿದ ದೇಹವೇ ಜೋಗುಳ ಹಾಡಿ ನಿದ್ರೆ ಕೊಡುತ್ತದೆ...
ಶ್ರೀಮಂತನಿಗೆ ಬಡತನದ ಭಯ...
ಬಡವನಿಗೆ ಶ್ರೀಮಂತನಾಗುವ ಚಿಂತೆ...
ಈ ಚಿಂತೆಗಳ ಸಂತೆಯಲ್ಲಿ ಪ್ರತಿದಿನ ಸಾವಿರ ಕನಸುಗಳು ಸಾಯುತ್ತವೆ...
ಆದರೆ...
ಬದುಕಿ ಸತ್ತವರ್ಯಾರು...?
ಸತ್ತು ಬದುಕಿದವರ್ಯಾರು...?
ಸತ್ತವನು ಮೌನವಾಗಿ ಮಲಗಿದ್ದಾನೆ...
ಮಲಗದವನು ಒಳಗೊಳಗೇ ಸಾವಿರ ಸಾವುಗಳನ್ನು ಸಾಯುತ್ತಿದ್ದಾನೆ...
ಹುಟ್ಟು... ಸಾವು... ಇವೆರಡರ ನಡುವಿನ ಈ ಚಿಕ್ಕ ಪ್ರಯಾಣದ ಅರ್ಥ ತಿಳಿದವನು ಮಾತ್ರ ಮೌನವಾಗಿ ನಗುತ್ತಿದ್ದಾನೆ...
ಬಡವ ಕಾಯಕದಲ್ಲಿ ದೇವರನ್ನು ಕಂಡ...
ಶ್ರೀಮಂತ ಕಲ್ಲಿನಲ್ಲಿ ದೇವರನ್ನು ಹುಡುಕಿದ...
ನಿಜ ಯಾವುದು...?
ಸುಳ್ಳು ಯಾವುದು...?
ಸುಳ್ಳಿನೊಳಗೂ ಒಂದು ನಿಜ ಮಲಗಿದೆ...
ನಿಜದ ನೆರಳಲ್ಲೂ ಸ್ವಲ್ಪ ಸುಳ್ಳು ಅಡಗಿದೆ...
ಕತ್ತಲೆಯ ಎದೆಯಲ್ಲೇ ಬೆಳಕು ಹುಟ್ಟುತ್ತದೆ...
ಬೆಳಕಿನ ಹಿಂದೆಯೇ ನೆರಳು ಓಡುತ್ತದೆ...
ಜೀವನವೂ ಹಾಗೆಯೇ...
ಎಲ್ಲವನ್ನೂ ಪಡೆದವನು ಏನನ್ನೋ ಕಳೆದುಕೊಂಡಿರುತ್ತಾನೆ...
ಏನನ್ನೂ ಪಡೆಯದವನು ಏನನ್ನೋ ಉಳಿಸಿಕೊಂಡಿರುತ್ತಾನೆ...
ಕೊನೆಗೆ...
ಬದುಕಿನ ಲೆಕ್ಕಾಚಾರದಲ್ಲಿ ಗೆದ್ದವರು ಯಾರೂ ಇಲ್ಲ...
ಸೋತವರು ಯಾರೂ ಇಲ್ಲ...
ನೆಮ್ಮದಿ ಕಂಡವನೇ ನಿಜವಾದ ಶ್ರೀಮಂತ.
ನಾನಾ

ಪ್ರೇಮಕವಿ JV
**–ಜಗದೀಶ ಎನ್. ಕಿತ್ತೂರು**

## ಕೊಟ್ಟೂರು ಎಪಿಎಂಸಿ ಆವರಣದಲ್ಲಿ ಬಿಡಿಸಿಸಿ ಬ್ಯಾಂಕ್ ನೂತನ ಶಾಖೆ ಉದ್ಘಾಟಿಸಿದ : ಉಜ್ಜಿನಿ ಶ್ರೀಗಳು

# ರೈತರು, ವರ್ತಕರು ಹಾಗೂ ಜನಸಾಮಾನ್ಯರಿಗೆ ಅನುಕೂಲ: ತಿಪ್ಪೇಸ್ವಾಮಿ

**ಹೊಸಪೇಟೆ ಧ್ವನಿ ನ್ಯೂಸ್ :**

**ಕೊಟ್ಟೂರು:** ಪಟ್ಟಣದ ಎಪಿಎಂಸಿ ಆವರಣದಲ್ಲಿ ಬಿಡಿಸಿಸಿ ಬ್ಯಾಂಕ್‌ನ ನೂತನ ಶಾಖೆಯನ್ನು ಉಜ್ಜಯಿನಿ ಸದ್ಧರ್ಮ ಪೀಠದ ಜಗದ್ಗುರು ಸಿದ್ದಲಿಂಗ ರಾಜ ದೇಶಿಕೇಂದ್ರ ಸ್ವಾಮೀಜಿ ಉದ್ಘಾಟಿಸಿದರು.




ಬಳಿಕ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ತಿಪ್ಪೇಸ್ವಾಮಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕೊಟ್ಟೂರು ಎಪಿಎಂಸಿ ಆವರಣದಲ್ಲಿ ಬಿಡಿಸಿಸಿ ಬ್ಯಾಂಕ್ ಶಾಖೆ ಆರಂಭಿಸಬೇಕೆಂಬುದು ಬಹುದಿನಗಳ ಬೇಡಿಕೆಯಾಗಿತ್ತು. ಇದೀಗ ಈ ಬೇಡಿ–ಕೆ ಈಡೇರಿದ್ದು, ರೈತರು, ದಲಾಲರು, ವರ್ತಕರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ನೂತನ ಶಾಖೆಯು ಬೆಳಿಗ್ಗೆ 11ರಿಂದ ರಾತ್ರಿ 10ರವರೆಗೆ ಕಾರ್ಯನಿರ್ವಹಿಸಲಿದೆ. ಇದರಿಂದ ಮಧ್ಯಮ ಹಾಗೂ ಕೆಳವರ್ಗದ ಜನರು ಸೇರಿದಂತೆ ವಿವಿಧ ವರ್ಗಗಳ ಗ್ರಾಹಕರಿಗೆ ಬ್ಯಾಂಕಿಂಗ್ ಸೇವೆ ಪಡೆಯಲು ಅನುಕೂಲವಾಗಲಿದೆ ಎಂದರು.

ಬ್ಯಾಂಕ್ ವತಿಯಿಂದ ವಾಹನ ಸಾಲ, ಚಿನ್ನದ ಸಾಲ, ವೈಯಕ್ತಿಕ ಸಾಲ, ಪಿಗ್ಮಿ ಸಾಲ ಹಾಗೂ ಗೃಹ ಸಾಲ ಸೇರಿದಂತೆ ವಿವಿಧ ಸಾಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಹೊಸ ಯೋಜನೆಗಳ ಸೌಲಭ್ಯಗಳೂ ಶಾಖೆಯಲ್ಲಿ ಲಭ್ಯವಾಗಲಿವೆ. ಬ್ಯಾಂಕ್ ನೌಕರರಿಗೆ ರೂ. 1 ಕೋಟಿ ವಿಮಾ ಪಾಲಿಸಿಯ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ರೈತರು, ವರ್ತಕರು ಹಾಗೂ ಸಾರ್ವಜನಿಕರಿಗೆ ಉತ್ತಮ ಮತ್ತು ಪರಿಣಾಮಕಾರಿ ಸೇವೆ ಒದಗಿಸುವುದು ನೂತನ ಶಾಖೆಯ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಐ.ಎಂ. ದಾರುಕೇಶ್, ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕ ಜಯಪ್ರಕಾಶ್, ಕೆಪಿಸಿಸಿ ಸದಸ್ಯ ಗೂಳಿ ಮಲ್ಲಿಕಾರ್ಜುನ, ಅಗಡಿ ಪಂಪಾಪತಿ, ಎಂ ಶ್ರೀನಿವಾಸ್ ಕರವೇ ಅಧ್ಯಕ್ಷ, ಪಟ್ಟಣ ಪಂಚಾಯತಿ ಮಾಜಿ ಸದಸ್ಯ ಶಿರಿಬಿ ಕೊಟ್ರೇಶ್, ಸೇರಿದಂತೆ ಬ್ಯಾಂಕ್ ಶಾಖೆಯ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

# ಎಸ್ಸಿ–ಎಸ್ಟಿ ಮೀಸಲಾತಿ ಹೆಚ್ಚಳ – ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂಗೆ ಮೇಲ್ಮನವಿ ಸಲ್ಲಿಸಿ – ವಾಲ್ಮೀಕಿ ಗುರುಪೀಠ



**ಹೊಸಪೇಟೆ ಧ್ವನಿ ನ್ಯೂಸ್ :**

**ಹರಪನಹಳ್ಳಿ:** ಪರಿಶಿಷ್ಟ ಜಾತಿ–ಪಂಗಡಗಳ ಮೀಸಲಾತಿ ಹೆಚ್ಚಳ ವಿಚಾರದ ಕಾನೂನು ತೊಡಕು ನಿವಾರಿಸಿ ಅರ್ಹ ಸಮುದಾಯಗಳಿಗೆ ನ್ಯಾಯ ಒದಗಿಸಲು ರಾಜ್ಯ ಸರ್ಕಾರ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂಕೋರ್ಟಿನಲ್ಲಿ ಮೇಲ್ಮನವಿ ಸಲ್ಲಿಸಬೇಕು ಎಂದು ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ಜಂಬಯ್ಯ ನಾಯಕ ಹೇಳಿದರು.

ನಗರದ ವಾಲ್ಮೀಕಿ ಸಮುದಾಯ ಭವನದಲ್ಲಿ ಜರುಗಿದ ವಿಜಯನಗರ ಜಿಲ್ಲಾ ವಾಲ್ಮೀಕಿ ನಾಯಕ ಸಮಾಜದ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಮೀಸಲಾತಿ ಹೆಚ್ಚಳ 2023ರ ಜನವರಿ 15ರ ರಾಜ್ಯಪತ್ರದ ನಿರ್ಧಾರವು ಬಹುದಿನಗಳ ಹೋರಾಟದ ಫಲ ಎಂದರು.

ತಾಲೂಕು ಅಧ್ಯಕ್ಷ ವೈ.ಡಿ.ಅಣ್ಣಪ್ಪ ಮಾತನಾಡಿ, ಮೀಸಲಾತಿ ಕಾನೂನುಬದ್ಧತೆ ಪ್ರಶ್ನಿಸಿ ಅರ್ಜಿ ಸಲ್ಲಿಕೆಯಾಗಿದ್ದು, ನೇಮಕಾತಿ ಪ್ರಕ್ರಿಯೆ ಮತ್ತು ಅಭ್ಯರ್ಥಿಗಳ ಭವಿಷ್ಯದ ಮೇಲೆ ಪರಿಣಾಮ ಬೀರಿದೆ, ಸಮುದಾಯ ಪರ ಅಂಶಗಳನ್ನು ಪರಿಣಾಮಕಾರಿಯಾಗಿ ಮಂಡಿಸಬೇಕು ಎಂದರು.

ಗೌರವಾಧ್ಯಕ್ಷ ಎಚ್.ಕೆ.ಹಾಲೇಶ ಮಾತನಾಡಿ, ಮೀಸಲಾತಿ ಆಧಾರದಲ್ಲಿ ನೇಮಕಾತಿ ಪಡೆದಿದ್ದ, ವಿಶೇಷವಾಗಿ ಶಿಕ್ಷಕರ ಹುದ್ದೆಗೆ ಆಯ್ಕೆಯಾಗಿದ್ದ ಅಭ್ಯರ್ಥಿಗಳು ಅನಿಶ್ಚಿತತೆ ಎದುರಿಸುತ್ತಿದ್ದಾರೆ, ಸರ್ಕಾರ ಕಾನೂನುಬದ್ಧ ಪರಿಹಾರ ಕಂಡುಕೊಳ್ಳಬೇಕು ಎಂದರು.

ಹಗರಿಬೊಮ್ಮನಹಳ್ಳಿ ಅಧ್ಯಕ್ಷ ಪಾವಡಿ ಹನುಮಂತಪ್ಪ, ಕೊಟ್ಟೂರು ಅಧ್ಯಕ್ಷ ಮಂಜುನಾಥ, ನೌಕರರ ಅಧ್ಯಕ್ಷ ಜಿ.ನಾಗಪ್ಪ, ಮಾಜಿ ಅಧ್ಯಕ್ಷ ಕೆ.ಉಚ್ಚೆಂಗೆಪ್ಪ ಮಾತನಾಡಿ, ಮೀಸಲಾತಿಯನ್ನು ರಾಜಕೀಯವಾಗಿ ನೋಡದೆ ಸಾಮಾಜಿಕ ನ್ಯಾಯದ ದೃಷ್ಟಿಯಿಂದ ನೋಡಬೇಕು, ಫ್ರೀಡಂ ಪಾರ್ಕ್ ಸೇರಿ ನಡೆದ ಹೋರಾಟದ ಆಶಯವನ್ನು ಸರ್ಕಾರ ಮರೆಯಬಾರದು, ಕಾನೂನು ತಜ್ಞರ ಸಲಹೆ ಪಡೆದು ಸಮುದಾಯದ ಹಿತ ಕಾಯಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಹಡಗಲಿ ಅಧ್ಯಕ್ಷ ಎಲ್.ಜಿ.ಹೊನ್ನಪ್ಪ, ಟಿಎಪಿಸಿಎಂಎಸ್ ಅಧ್ಯಕ್ಷ ಟಿ.ಉಮಾಕಾಂತ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಸಾಪುರದ ಮಂಜುನಾಥ, ಕರವೇ ಅಧ್ಯಕ್ಷ ಗಿರಜ್ಜಿ ನಾಗರಾಜ, ಕಾರ್ಯದರ್ಶಿ ಎಚ್.ಕೆ.ಮಂಜುನಾಥ ಸೇರಿ ಅನೇಕ ಮುಖಂಡರು, ಮಹಿಳಾ ಮುಖಂಡರಾದ ಟಿ.ಪದ್ಮಾವತಿ, ಮಂಜುಳಾ, ಗೀತಾ, ಶೋಭಾ ಮತ್ತಿತರರು ಇದ್ದರು.

## ಮದುವೆಯಾಗುವುದಾಗಿ ನಂಬಿಸಿ ಕೈಕೊಟ್ಟ ಪ್ರಿಯಕರ; ಮನೆ ಮುಂದೆ ಯುವತಿ ಪ್ರತಿಭಟನೆ

**ಕೋಲಾರ:** ಮದುವೆಯಾಗುವುದಾಗಿ ಭರವಸೆ ನೀಡಿ ಬಳಿಕ ಮದುವೆಗೆ ನಿರಾಕರಿಸಿದ್ದಾರೆ ಎಂದು ಆರೋಪಿಸಿ 25 ವರ್ಷದ ಯುವತಿಯೊಬ್ಬರು ಪ್ರಿಯಕರನ ಮನೆ ಎದುರು ಮೌನ ಪ್ರತಿಭಟನೆ ನಡೆಸಿದ ಘಟನೆ ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಹನುಮನಾಯಕನಹಳ್ಳಿ ಗ್ರಾಮದಲ್ಲಿ ನಡೆದಿದೆ.



ಮಾಲೂರು ತಾಲ್ಲೂಕಿನ ಚಿಕ್ಕಕಡತೂರು ಗ್ರಾಮದ ಶಿವರಂಜನಿ (25) ಪ್ರತಿಭಟನೆ ನಡೆಸಿದ ಯುವತಿ. ಹನುಮನಾಯಕನಹಳ್ಳಿ ಗ್ರಾಮದ ಪೃಥ್ವಿರಾಜ್ (24) ಎಂಬ ಯುವಕನ ವಿರುದ್ಧ ಅವರು ಆರೋಪ ಮಾಡಿದ್ದಾರೆ.

ಪೃಥ್ವಿರಾಜ್ ತನನ್ನು ಪ್ರೀತಿಸಿ ಮದುವೆಯಾದುವುದಾಗಿ ಭರವಸೆ ನೀಡಿ–ದ್ದ. ಆದರೆ ಬಳಿಕ ನನ್ನ ಜಾತಿ ವಿಚಾರವಾಗಿ ತಗಾದೆ ತೆಗೆದು ಇದೀಗ ನನ್ನ ಕೈ ಬಿಟ್ಟಿದ್ದಾನೆ ಎಂದು ಯುವತಿ ಆರೋಪಿಸಿದ್ದಾರೆ. ಯುವತಿಯ ಈ ಪ್ರತಿಭಟನೆಯ ವಿಡಿಯೋ ಇದೀಗ ವ್ಯಾಪಕ ವೈರಲ್ ಆಗುತ್ತಿದೆ.

ಸಂತ್ರಸ್ಥೆ ಶಿವರಂಜನಿ ಅವರ ಆರೋಪದ ಪ್ರಕಾರ, ಇನ್‌ಸ್ಟಾಗ್ರಾಂ ಮೂಲಕ ಪೃಥ್ವಿರಾಜ್ ಪರಿಚಯವಾಗಿದ್ದರು. ಬಳಿಕ ಇಬ್ಬರ ನಡುವಿನ ಸ್ನೇಹ ಪ್ರೀತಿಯಾಗಿ ಬದಲಾಗಿತ್ತು. ಈ ವೇಳೆ ಪೃಥ್ವಿರಾಜ್ ಮದುವೆಯಾಗುವುದಾಗಿ ಭರವಸೆ ನೀಡಿದ್ದರು. ಆದರೆ, ಇದೀಗ ಮದುವೆಯಾಗಲು ನಿರಾಕರಿಸುತ್ತಿದ್ದಾರೆ ಎಂದು ಶಿವರಂಜನಿ ಆರೋಪಿಸಿದ್ದಾರೆ.

ಅಲ್ಲದೆ, ಪೃಥ್ವಿರಾಜ್ ತಮ್ಮ ಮೊಬೈಲ್ ಫೋನ್ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ ಎಂದೂ ಅವರು ದೂರಿದ್ದಾರೆ. ಇದರಿಂದ ನ್ಯಾಯಕ್ಕಾಗಿ ಆಗ್ರಹಿಸಿ ಯುವತಿ ಪೃಥ್ವಿರಾಜ್ ಅವರ ಮನೆ ಮುಂದೆ ಕುಳಿತು ಮೌನ ಪ್ರತಿಭಟನೆ ನಡೆಸಿದ್ದಾರೆ.

## ದಸರಾ ರಾಜ್ಯಮಟ್ಟದ ಕ್ರೀಡಾಕೂಟ: ಯೋಗಾಸನದಲ್ಲಿ ಕೆಂಚಟನಹಳ್ಳಿ ವಿದ್ಯಾರ್ಥಿ ಶ್ಯಾಮ್‌ಗೆ ಪ್ರಥಮ ಸ್ಥಾನ

**ಹೊಸಪೇಟೆ ಧ್ವನಿ ನ್ಯೂಸ್ :**

**ಹಗರಿಬೊಮ್ಮನಹಳ್ಳಿ:** ಮೈಸೂರಿನಲ್ಲಿ ದಿನಾಂಕ 11–10–2026 ರಿಂದ 14–10–2026 ರವರೆಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕ್ರೀಡಾ ಪ್ರಾಧಿಕಾರ ಹಾಗೂ ದಸರಾ ಕ್ರೀಡಾ ಉಪಸಮಿತಿ ವತಿಯಿಂದ ಆಯೋಜಿಸಿದ್ದ ದಸರಾ ರಾಜ್ಯಮಟ್ಟದ ಕ್ರೀಡಾಕೂಟ 2026 ರ ಸಿಎಂ ಕಪ್ ಅನ್ನು ಹಗರಿಬೊಮ್ಮನಹಳ್ಳಿ ತಾಲೂಕಿನ ಕೆಂಚಟನಹಳ್ಳಿ ಗ್ರಾಮದ ವಿದ್ಯಾರ್ಥಿ ಶ್ಯಾಮ್ ಬಿ. ತಂದೆ ದುರುಗಪ್ಪ ಅವರು ಯೋಗಾಸನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.



ಶ್ಯಾಮ್ ಅವರ ಸಾಧನೆಗೆ ಗ್ರಾಮಸ್ಥರು, ಶಾಲಾ ಶಿಕ್ಷಕರು ಹಾಗೂ ಕ್ರೀಡಾ ಪ್ರೇಮಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಎಸ್‌ಐಆರ್ ರದ್ದುಪಡಿಸಿ, ಮುಖ್ಯ ಚುನಾವಣಾ ಆಯುಕ್ತರನ್ನು ವಜಾಗೊಳಿಸಲು ಆಗ್ರಹ

## ಜಿಲ್ಲಾಧಿಕಾರಿ ಕಚೇರಿ ಎದುರು ದಲಿತ ಸಂಘರ್ಷ ಸಮಿತಿಯಿಂದ ಧರಣಿ; ಕ್ರಿಮಿನಲ್ ಪ್ರಕರಣ ದಾಖಲಿಸಲು ಒತ್ತಾಯ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ :** ಮತದಾರರ ಹಕ್ಕುಗಳಿಗೆ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ರದ್ದುಪಡಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಿ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಡಿ.ಜಿ. ಸಾಗರ್ ಬಣ) ಬಳ್ಳಾರಿ ಜಿಲ್ಲಾ ಸಮಿತಿ ವತಿಯಿಂದ ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನಾ ಧರಣಿ ನಡೆಸಲಾಯಿತು.




ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಎ. ಮಾನಯ್ಯ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಹಲವು ಲೋಪದೋಷಗಳಿದ್ದು, ಅರ್ಹ ಮತದಾರರು ತಮ್ಮ ಮತದಾನದ ಹಕ್ಕನ್ನು ಕಳೆದುಕೊಳ್ಳುವ ಆತಂಕ ಎದುರಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಹಕ್ಕು ಅತ್ಯಂತ ಮಹತ್ವದ್ದಾಗಿದ್ದು, ಅರ್ಹ ಮತದಾರರನ್ನು ಪಟ್ಟಿಯಿಂದ ಹೊರಗಿಡುವಂತಹ ಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿದರು.

ಚುನಾವಣಾ ಆಯೋಗದ ನಿರ್ಧಾರಗಳು ಹಾಗೂ ಕಾರ್ಯವೈಖರಿಯ ಕುರಿತು ಅನುಮಾನಗಳು ವ್ಯಕ್ತವಾಗಿದ್ದು, ಎಸ್‌ಐಆರ್ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ಕಾನೂನುಬದ್ಧತೆಯ ಬಗ್ಗೆ ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದರು.

ಹೊಸ ಮತದಾರರ ನೋಂದಣಿಗೆ ಸಂಬಂಧಿಸಿದ ಫಾರಂ–6ಕ್ಕೆ ತಿದ್ದುಪಡಿ ತಂದು, ಎಸ್‌ಐಆರ್ ಅವಧಿಯಲ್ಲಿ ಹೆಚ್ಚುವರಿ ಘೋಷಣಾ ಪತ್ರಕ್ಕೆ ಸಹಿ ಪಡೆಯುವ ಕ್ರಮವು ಮತದಾರರಿಗೆ ಅನಗತ್ಯ ತೊಂದ–ರೆ ಉಂಟುಮಾಡುತ್ತಿದೆ ಎಂದು ಸಮಿತಿ ಮುಖಂಡರು ಆಕ್ಷೇಪಿಸಿದರು. ಇಂತಹ ಕ್ರಮಗಳಿಂದ ಅರ್ಹ ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದೇಶದಾದ್ಯಂತ ಕೋಟ್ಯಂತರ ಮತದಾರರ ಹಕ್ಕುಗಳ ಮೇಲೆ ಪರಿಣಾಮ ಬೀರಬಹುದಾದ ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸಬೇಕು. ಚುನಾವಣಾ ಆಯೋಗದ ನಿರ್ಧಾರಗಳ ಕುರಿತು ನ್ಯಾಯಸಮ್ಮತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಿ, ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

**ಪ್ರತಿಭಟನೆಯಲ್ಲಿ ಭಾಗಿ:** ರಾಜ್ಯ ಚಲುವಾದಿ ಮಹಾಸಭಾದ ಉಪಾಧ್ಯಕ್ಷ ಸಿ. ನರಸಪ್ಪ, ಜಿಲ್ಲಾ ಸಂಘಟನಾ ಸಂಚಾಲಕರಾದ ದೇವದಾಸ, ಕೆ.ಎಚ್. ಆಂಜನೇಯ, ಮುಖಂಡರಾದ ಬಿ. ರಮೇಶ್, ಟಿ.ಎಂ. ಎರಿಸ್ವಾಮಿ, ತಾಲೂಕು ಸಂಚಾಲಕರಾದ ಹೆಚ್. ಮಲ್ಲಪ್ಪ, ದೊಡ್ಡಬಸಪ್ಪ, ಭೀಮೇಶಿ, ಎಸ್. ವೀರೇಶ, ಹೆಚ್. ವೀರೇಶ್, ಜಗದೀಶ್, ರಾಮಯ್ಯ, ಕುಮಾರ್, ಬಸವರಾಜ ಸೇರಿದಂತೆ ವಿವಿಧ ತಾಲೂಕುಗಳ ಸಂಘಟನಾ ಸಂಚಾಲಕರು ಹಾಗೂ ಸಮಿತಿಯ ಮುಖಂಡರು ಭಾಗವಹಿಸಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಪ್ರೊ. ಶಂಕರ ರೆಡ್ಡಿ ಪಾಟೀಲರಿಗೆ ಪ್ರಥಮ ಪ್ರಾಶಸ್ತ್ಯದ ಮತಕ್ಕೆ ಮನವಿ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ:** ಕಲ್ಯಾಣ ಕರ್ನಾಟಕದ ಶಿಕ್ಷಕರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಉದ್ದೇಶದಿಂದ ಈಶಾನ್ಯ ಕರ್ನಾಟಕ ಶಿಕ್ಷಕರ ಮತಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಜನತಾದಳ (ಸಂಯುಕ್ತ) ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಪ್ರೊ. ಶಂಕರ ರೆಡ್ಡಿ ಪಾಟೀಲರಿಗೆ ಶಿಕ್ಷಕ ಮತದಾರರು ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಬೇಕು ಎಂದು ಪಕ್ಷದ ಮುಖಂಡರು ಮನವಿ ಮಾಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡರು, ಪ್ರೊ. ಶಂಕರ ರೆಡ್ಡಿ ಪಾಟೀಲರು ಶಿಕ್ಷಣ ಕ್ಷೇತ್ರದಲ್ಲಿ ಸುಮಾರು 40 ವರ್ಷಗಳ ಸುದೀರ್ಘ ಅನುಭವ ಹೊಂದಿದ್ದಾರೆ. ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯಲ್ಲಿ ಸಮಾಜಶಾಸ್ತ್ರದ ಪ್ರಾಧ್ಯಾಪಕರಾಗಿ, ಸಂಶೋಧಕರಾಗಿ ಹಾಗೂ ವಿದ್ಯಾರ್ಥಿಗಳ ಮಾರ್ಗದರ್ಶಕರಾಗಿ ಸೇವೆ ಸಲ್ಲಿಸಿದ್ದಾರೆ. ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿಯೂ ವಿವಿಧ ಶೈಕ್ಷಣಿಕ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದಾರೆ. ಹೀಗಾಗಿ ಶಿಕ್ಷಣ ಕ್ಷೇತ್ರದ ಸಮಸ್ಯೆಗಳು ಹಾಗೂ ಸವಾಲುಗಳ ಬಗ್ಗೆ ಅವರಿಗೆ ಆಳವಾದ ಅರಿವಿದೆ ಎಂದು ತಿಳಿಸಿದರು.




ಕಾಲೇಜು ಶಿಕ್ಷಕರ ಸಂಘಟನೆಯ ಮೂಲಕ ಕಲ್ಯಾಣ ಕರ್ನಾಟಕದ ವಿವಿಧ ಜಿಲ್ಲೆಗಳ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿರುವ ಅವರು, ಸಂಘಟನೆಯ ಅಧ್ಯಕ್ಷರಾಗಿ ಸಮರ್ಥ ನಾಯಕತ್ವ ನೀಡಿದ್ದಾರೆ. ಸಹಕಾರಿ ಸಂಘಗಳ ನಿರ್ದೇಶಕರಾಗಿ 20 ವರ್ಷಗಳ ಅನುಭವ ಹೊಂದಿದ್ದು, ಈ ಭಾಗದ ಸಾಹಿತ್ಯ, ಸಂಸ್ಕೃತಿ ಹಾಗೂ ಸಾಮಾಜಿಕ ಚಳವಳಿಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಆಜೀವ ಸದಸ್ಯರಾಗಿರುವ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರ ಶಿಕ್ಷಣ, ಸಂಘಟನೆ ಮತ್ತು ಹೋರಾಟದ ತತ್ವಗಳಲ್ಲಿ ನಂಬಿಕೆ ಇಟ್ಟುಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು. ಶಿಕ್ಷಕರ ಸಮಸ್ಯೆಗಳನ್ನು ಸಮರ್ಥವಾಗಿ ಅರಿತು, ಅವುಗಳ ಪರಿಹಾರಕ್ಕಾಗಿ ವಿಧಾನ ಪರಿಷತ್ತಿನಲ್ಲಿ ಪರಿಣಾಮಕಾರಿಯಾಗಿ ಧ್ವನಿ ಎತ್ತುವ ಸಾಮರ್ಥ್ಯ ಪ್ರೊ. ಶಂಕರ ರೆಡ್ಡಿ ಪಾಟೀಲರಿಗಿದೆ. ಈ ಹಿನ್ನೆಲೆಯಲ್ಲಿ ಜನತಾದಳ (ಸಂಯುಕ್ತ) ಪಕ್ಷದ ಕೇಂದ್ರ ಹಾಗೂ ರಾಜ್ಯ ಮಟ್ಟದ ನಾಯಕರು ಅವರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ್ದಾರೆ. ಕಲ್ಯಾಣ ಕರ್ನಾಟಕದಾದ್ಯಂತ ಚುನಾವಣಾ ಪ್ರಚಾರ ಕೈಗೊಂಡಿದ್ದು, ಅದರ ಭಾಗವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಶಿಕ್ಷಕ ಮತದಾರರ ಬೆಂಬಲ ಕೋರಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ, ಕೆಆರ್‌ಎಸ್ ಪಕ್ಷದ ಅಧ್ಯಕ್ಷ ರವಿಕೃಷ್ಣಾ ರೆಡ್ಡಿ ಸೇರಿದಂತೆ ಪಕ್ಷದ ಇತರ ನಾಯಕರು ಜನತಾದಳ (ಸಂಯುಕ್ತ) ಅಭ್ಯರ್ಥಿಗೆ ಬೆಂಬಲ ಘೋಷಿಸಿದ್ದಾರೆ. ಬಳ್ಳಾರಿ ಜಿಲ್ಲೆಯ ಕೆಆರ್‌ಎಸ್ ಪಕ್ಷದ ಮುಖಂಡರೂ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದು, ಅಭ್ಯರ್ಥಿಗೆ ತಮ್ಮ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ಮುಖಂಡರು ತಿಳಿಸಿದರು.

ಅಕ್ಟೋಬರ್ 23ರಂದು ನಡೆಯಲಿರುವ ಮತದಾನದಲ್ಲಿ ಶಿಕ್ಷಕ ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೆ, ತಮ್ಮ ಅಮೂಲ್ಯ ಮತವನ್ನು ಚಲಾಯಿಸಬೇಕು. ಶಿಕ್ಷಣ ಕ್ಷೇತ್ರದಲ್ಲಿ ಸುದೀರ್ಘ ಅನುಭವ ಹೊಂದಿರುವ ಪ್ರೊ. ಶಂಕರ ರೆಡ್ಡಿ ಪಾಟೀಲರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವ ಮೂಲಕ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಸಹಕರಿಸಬೇಕು. ಪ್ರತಿಯೊಬ್ಬ ಅರ್ಹ ಶಿಕ್ಷಕ ಮತದಾರರೂ ಕಡ್ಡಾಯವಾಗಿ ಮತದಾನದಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ್ ಜಳಗೇರಿ, ಪ್ರೊ. ಶಂಕರ ರೆಡ್ಡಿ ಪಾಟೀಲ್, ಸಿದ್ದರಾಮಪ್ಪ ಬಸಪ್ಪ ವೀರಣ್ಣಾವರ, ಶಿವರಾಮ್, ಚಂದ್ರಶೇಖರ್ ಹಾಗೂ ವೀರೇಶ್ ಉಪಸ್ಥಿತರಿದ್ದರು.

## ಜಮೀನಿಗೆ ನುಗ್ಗಿದ ಖಾಸಗಿ ಬಸ್; 8 ವರ್ಷದ ಬಾಲಕಿ ಸಾವು, 16 ಮಂದಿಗೆ ಗಂಭೀರ ಗಾಯ

**ಹುಬ್ಬಳ್ಳಿ:** ಖಾಸಗಿ ಬಸ್ಸೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ಜಮೀನಿಗೆ ನುಗ್ಗಿದ ಪರಿಣಾಮ ಓರ್ವ ಬಾಲಕಿ ಸಾವನ್ನಪ್ಪಿ ಕನಿಷ್ಠ 16 ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಹುಬ್ಬಳ್ಳಿಯ ಬಳಿ ಮುಂಜಾನೆ ನಡೆದಿದೆ.

ಮುಂಬೈನಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್, 'ಚಬ್ಬಿ ಕ್ರಾಸ್' ದಾಟಿದ ಸ್ವಲ್ಪ ಸಮಯದ ನಂತರ ಈ ಅಪಘಾತ ಸಂಭವಿಸಿದೆ. ಬೆಳಗಿನ ಜಾವ ಸುಮಾರು 3 ಗಂಟೆಗೆ ಅಪಘಾತವಾಗಿದೆ ಎನ್ನಲಾಗಿದೆ. ಗಾಯಗೊಂಡವರಲ್ಲಿ ಚಾಲಕ ಕೂಡ ಸೇರಿದ್ದಾರೆ.

ಚಾಲಕನ ನಿಯಂತ್ರಣ ತಪ್ಪಿದ್ದರಿಂದ ಬಸ್ ರಸ್ತೆಯಿಂದ ಪಕ್ಕಕ್ಕೆ ಸರಿದು ಜಮೀನಿನೊಳಗೆ ನುಗ್ಗಿದೆ ಎಂದು ಪೊಲೀಸರು ಹೇಳಿದ್ದಾರೆ.ಅಪಘಾತದ ತೀವ್ರತೆಗೆ ಚಾಲಕನ ಕಾಲು ಬಸ್ಸಿನೊಳಗೆ ಸಿಲುಕಿಕೊಂಡಿತ್ತು. ಇದರಿಂದ ತೀವ್ರ ನೋವಿನಲ್ಲಿದ್ದ ಚಾಲಕ, ಹೊರಬರಲು ಪರದಾಡುತ್ತಿದ್ದರು ಎಂದು ತಿಳಿದುಬಂದಿದೆ.

## ಈಶಾನ್ಯ ಕರ್ನಾಟಕ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಶಿವಶಂಕರ ತರನಹಳ್ಳಿ ಸ್ಪರ್ಧೆ

# ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಪ್ರಥಮ ಆದ್ಯತೆಯ ಮತ ನೀಡುವಂತೆ ಮನವಿ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ:** ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರ ಸಮಸ್ಯೆಗಳ ಪರಿಹಾರ, ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಹಕ್ಕುಗಳ ರಕ್ಷಣೆಗಾಗಿ ವಿಧಾನ ಪರಿಷತ್ತಿನಲ್ಲಿ ಧ್ವನಿ ಎತ್ತುವ ಉದ್ದೇಶದಿಂದ ಮುಂಬರುವ ಈಶಾನ್ಯ ಕರ್ನಾಟಕ (ಕಲ್ಯಾಣ ಕರ್ನಾಟಕ) ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಅಖಿಲ ಕರ್ನಾಟಕ ಶಿಕ್ಷಕರ ಸಂಘದ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವುದಾಗಿ ಶಿವಶಂಕರ ಅಣ್ಣಪ್ಪ ತರನಹಳ್ಳಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರಾಗಿ ಹಾಗೂ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕರಾಗಿ ಸೇವೆ ಸಲ್ಲಿಸಿದ್ದೇನೆ. ಶಿಕ್ಷಕರ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರ ಹೋರಾಟ ನಡೆಸುತ್ತಿದ್ದು, ತಮ್ಮ ಅನುಭವವನ್ನು ಶಿಕ್ಷಕರ ಹಿತಾಸಕ್ತಿ ಕಾಪಾಡಲು ಬಳಸಿಕೊಳ್ಳುವ ಉದ್ದೇಶ ಹೊಂದಿದ್ದೇನೆ. ಈ ಹಿನ್ನೆಲೆಯಲ್ಲಿ ಶಿಕ್ಷಕ ಮತದಾರರು ತಮ್ಮ ಪ್ರಥಮ ಆದ್ಯತೆಯ ಮತ ನೀಡಿ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಶಾಲೆಗಳು ಕೇವಲ ಪಾಠ ಬೋಧಿಸುವ ಕೇಂದ್ರಗಳಾಗಿರದೆ, ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡುವ ತಾಣಗಳಾಗಬೇಕು ಎಂಬ ಆಶಯದೊಂದಿಗೆ ಕಾರ್ಯನಿರ್ವಹಿಸುತ್ತಿದ್ದೇನೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಉದ್ದೇಶದಿಂದ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಶಿಕ್ಷಕರಿಗೆ ತರಬೇತಿ ಶಿಬಿರಗಳು, ಕಾರ್ಯಾಗಾರಗಳು, ವಿಚಾರ ಸಂಕಿರಣಗಳು ಮತ್ತು ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮಗಳಲ್ಲಿ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ಸಂಪನ್ಮೂಲ ವ್ಯಕ್ತಿಗಳು ಮಾರ್ಗದರ್ಶನ ನೀಡಿದ್ದಾರೆ ಎಂದು ತಿಳಿಸಿದರು.




ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಹಾಗೂ ರಾಜ್ಯಪಾಲರಾಗಿದ್ದ ರಾಮ ಜೋಯಿಸ್, ಶಿಕ್ಷಣ ತಜ್ಞ ಗುರುರಾಜ ಕರ್ಜಗಿ, ಡಾ. ವೇಣುಗೋಪಾಲ್ ಮತ್ತು ಅರವಿಂದ್ ಜತ್ತಿ ಸೇರಿದಂತೆ ಹಲವು ಗಣ್ಯರು ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಮಾರ್ಗದರ್ಶನ ನೀಡಿದ್ದಾರೆ. ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳ ವಿವಿಧ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಪರೀಕ್ಷಾ ಸಿದ್ಧತೆ ಸೇರಿದಂತೆ ಹಲವು ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕರ್ನಾಟಕ ರಾಜ್ಯ ಪಠ್ಯಪುಸ್ತಕ ಪರಿಶೀಲನಾ ಸಮಿತಿಯ ಸದಸ್ಯನಾಗಿ ಸೇವೆ ಸಲ್ಲಿಸಿರುವುದಾಗಿ ತಿಳಿಸಿದ ಅವರು, ಶಾಲಾ ಶಿಕ್ಷಕರಿಗೆ ವೇತನಾನುದಾನ ದೊರಕಿಸಿಕೊಡುವ ನಿಟ್ಟಿನಲ್ಲಿ ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲ ನಿರಂತರ ಹೋರಾಟ ನಡೆಸಿಕೊಂಡು ಬರುತ್ತಿದ್ದೇನೆ ಎಂದು ಹೇಳಿದರು.

ಇನ್ಫೋಸಿಸ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಸಹಕಾರದೊಂದಿಗೆ ಬೀದರ್ ಜಿಲ್ಲೆಯ ಶಾಲೆಗಳಿಗೆ ಉಚಿತ ಕಂಪ್ಯೂಟರ್‌ಗಳು, ಪುಸ್ತಕಗಳು, ಸ್ಮಾರ್ಟ್ ಬೋರ್ಡ್‌ಗಳು ಹಾಗೂ ಇತರ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವ ಕಾರ್ಯದಲ್ಲಿಯೂ ತೊಡಗಿಸಿಕೊಂಡಿದ್ದೇನೆ. ಸಾಹಿತ್ಯ ಕ್ಷೇತ್ರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷನಾಗಿ ಹಾಗೂ ಕನ್ನಡ ಪ್ರಾಧಿಕಾರದ ಸದಸ್ಯನಾಗಿ, ಮಾಧ್ಯಮ ಕ್ಷೇತ್ರದಲ್ಲಿ ಪ್ರಜಾವಾಣಿ ಮತ್ತು ಡೆಕ್ಕನ್ ಹೆರಾಲ್ಡ್ ಸೇರಿದಂತೆ ವಿವಿಧ ಪತ್ರಿಕೆಗಳಿಗೆ ವರದಿಗಾರನಾಗಿ ಕಾರ್ಯನಿರ್ವಹಿಸಿದ ಅನುಭವವಿದೆ ಎಂದು ವಿವರಿಸಿದರು.

ಶಿಕ್ಷಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಲ್ಪಿಸುವುದು, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದು ಹಾಗೂ ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ವೇಗ ನೀಡುವುದು ತಮ್ಮ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಕ ಬಂಧುಗಳು ತಮ್ಮ ಪ್ರಥಮ ಆದ್ಯತೆಯ ಮತ ನೀಡಿ ಬೆಂಬಲಿಸಬೇಕು ಎಂದು ಶಿವಶಂಕರ ಅಣ್ಣಪ್ಪ ತರನಹಳ್ಳಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅಶ್ವಥ್ ಸೂಗೂರ್, ಹುಂದಾಯ ಹಾಗೂ ಸಂಗಮೇಶ ಜವಾದಿ ಉಪಸ್ಥಿತರಿದ್ದರು.

Hosapete Dhwani Kannada Daily Editor, Printer, Publisher & Owned By K. Prakash Kakubalu, 120, 1ST Ward, Kakubal Post Hospet, Ballary, Dist : Vijayanagara Karnataka State,
Printed at Dwaraka Printers & Publishers, Plot No. 12, Opp. Govt. Girls Hostel, GaneshaNagara Koppal-583231 Koppal District, Karnataka State,
e-mail : hosapetedhwani32026@gmail.com, Cell : 9342568684